ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

ಸಂಪಾದಕರು: ಸುಂದರ್ Editor : Sundar

Volume: 01, Issue: 167 RNI Number : KNKAN/25/A2770 25-06-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :167 ರಾಯಚೂರು 25-06-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಸಚಿವರಿಲ್ಲದೆ ಸೊರಗುತ್ತಿದೆ ಶಿಕ್ಷಣ ಇಲಾಖೆ

ಬೆಂಗಳೂರು, ಜೂ. 24-

ಶೈಕ್ಷಣಿಕ ವರ್ಷ ಆರಂಭಗೊಂಡರೂ ರಾಜ್ಯದಲ್ಲಿ ಶಿಕ್ಷಣ ಸಚಿವರುಗಳಿಲ್ಲದೇ ವ್ಯಾಸಂಗ ಸೊರಗುವಂತಾಗಿದೆ. ರಾಜಕೀಯ ಕಾರಣಗಳಿಗಾಗಿ ಸಚಿವ ಸಂಪುಟ ಪೂರ್ಣ ಪ್ರಮಾಣದಲ್ಲಿ ರಚನೆಯಾಗಿಲ್ಲ. ಅದರಲ್ಲೂ ಪ್ರಮುಖವಾಗಿ ಕೃಷಿ ಮತ್ತು ಶಿಕ್ಷಣ ಇಲಾಖೆಗೆ ಪ್ರತ್ಯೇಕ ಸಚಿವರಿಲ್ಲದೇ, ಈ ಪ್ರಮುಖ ಖಾತೆಗಳು ಮುಖ್ಯಮಂತ್ರಿಯವರ ಬಳಿಯೇ ಉಳಿದಿವೆ.

ನೈರುತ್ಯ ಮುಂಗಾರು ಆರಂಭವಾಗಿ ಕೃಷಿ ವರ್ಷ ಶುರುವಾಗಿದೆ. ಜೂನ್‌ನಿಂದ ಶೈಕ್ಷಣಿಕ ವರ್ಷ ಕೂಡ ಆರಂಭಗೊಂಡಿದೆ. ಶಾಲಾ, ಕಾಲೇಜುಗಳಲ್ಲಿ ಪ್ರವೇಶ ಹಾಗೂ ಇತರೆ ಚಟುವಟಿಕೆಗಳು ಬಿರುಸಿನಿಂದ ನಡೆಯುತ್ತಿವೆ. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಮತ್ತು ಕಾಲೇಜು ಶಿಕ್ಷಣಕ್ಕೆ ಪ್ರತ್ಯೇಕವಾದ ಸಚಿವರ ಅಗತ್ಯತೆ ಇತ್ತು.

ಶಿಕ್ಷಣದಲ್ಲಿ ಮಹತ್ವದ ಸುಧಾರಣೆ ಮಾಡಲು ಹಿಂದಿನ ಸಿದ್ದರಾಮಯ್ಯ



ಸರ್ಕಾರ, ಹಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಂಡಿದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಒಪ್ಪದೇ, ಕರ್ನಾಟಕ ತನ್ನದೇ ಆದ ಶಿಕ್ಷಣ ನೀತಿ ರೂಪಿಸಲು ಮುಂದಾಗಿದೆ. ಅದಕ್ಕಾಗಿ ತಜ್ಞರ ಸಮಿತಿಯನ್ನು ರಚಿಸಿ ವರದಿ ಪಡೆಯುವ ಪ್ರಯತ್ನಗಳಾಗಿದ್ದವು. ಜೊತೆಗೆ ರಾಜ್ಯಾದ್ಯಂತ ಸುಮಾರು 800ಕ್ಕೂ ಹೆಚ್ಚು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲು ಕ್ರಿಯಾ ಯೋಜನೆ ಸಿದ್ಧವಾಗಿದೆ. ಈ ಹಂತದಲ್ಲಿ ಇಲಾಖೆಗೆ ಪ್ರತ್ಯೇಕವಾದ ಸಚಿವರ ಅಗತ್ಯ ಹೆಚ್ಚಿತ್ತು.

ಶಾಲಾ, ಕಾಲೇಜುಗಳ ಪ್ರವೇಶದಲ್ಲಿ ಸರ್ಕಾರಿ ಕಾಲೇಜುಗಳಿಗೆ ವಿದ್ಯಾರ್ಥಿಗಳ ಕೊರತೆಯಾದರೆ, ಖಾಸಗಿ ಶಾಲೆಗಳಲ್ಲಿ ಅಧಿಕವಾದ ಶುಲ್ಕ, ಅನಧಿಕೃತವಾದ ಡೊನೇಷನ್ ಹಾವಳಿಯಿಂದ ಪೋಷಕರು ಹೈರಾಣಾಗುತ್ತಿದ್ದಾರೆ. ಸಚಿವರಿಲ್ಲದ ಕಾರಣ ಅಧಿಕಾರಿಗಳು ತಮ ವ್ಯಾಪ್ತಿಯಲ್ಲಷ್ಟೇ ಕೆಲಸ ಮಾಡಲು ಸಾಧ್ಯವಾಗುತ್ತಿದೆ. ಕೆಲವು ವಿಚಾರಗಳಲ್ಲಿ ಜನ ಪ್ರಾತಿನಿಧ್ಯದ ಅಗತ್ಯ ತೀವ್ರವಾಗಿದೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಕೊರತೆ ಎದ್ದು ಕಾಣುತ್ತಿದೆ.

ಶಾಲಾ ಶಿಕ್ಷಣ ವ್ಯಾಪ್ತಿಯಲ್ಲಿ 41 ಸಾವಿರಕ್ಕೂ ಹೆಚ್ಚು ಪ್ರಾಥಮಿಕ ಶಾಲೆಗಳು ಮತ್ತು ಸಾವಿರಾರು ಪ್ರೌಢ ಶಾಲೆಗಳಿವೆ. 1,78,935 ಶಿಕ್ಷಕರ ಹುದ್ದೆಗಳು ಮಂಜೂರಾಗಿವೆ. ರಾಜ್ಯದಲ್ಲಿ 1.33 ಲಕ್ಷ ಶಿಕ್ಷಕರು ಕೆಲಸ ಮಾಡುತ್ತಿದ್ದು, 45,590 ಹುದ್ದೆಗಳು ಖಾಲಿ ಇವೆ. 51 ಸಾವಿರ ಅತಿಥಿ ಶಿಕ್ಷಕರನ್ನು 2026-27ನೇ ಸಾಲಿಗೆ ನೇಮಿಸಿಕೊಳ್ಳಲು ರಾಜ್ಯ ಸರ್ಕಾರ ಅನುಮತಿಸಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳಲ್ಲಿ 79 ಸಾವಿರಕ್ಕೂ ಹೆಚ್ಚು ಉನ್ನತ ಶಿಕ್ಷಣದಲ್ಲಿ 13,600 ಬೋಧಕ ಹಾಗೂ ಬೋಧಕೇತರ ಹುದ್ದೆಗಳು ಖಾಲಿ ಇವೆ. ರಾಜ್ಯ ಸರ್ಕಾರ 15 ಸಾವಿರ ಶಿಕ್ಷಕರ ನೇಮಕಾತಿಗೆ ಮುಂದಾಗಿದೆ. ಇಂತಹ ಸಂದರ್ಭದಲ್ಲಿ ಶಿಕ್ಷಣ ಸಚಿವರಿಲ್ಲದೇ ಇರುವುದು ಭಾರೀ ಕೊರತೆಯಾಗಿ ಕಾಣಿಸುತ್ತಿದೆ.

ಪಠ್ಯಪುಸ್ತಕ, ಶೂ, ಸಾಕ್ಸ್ , ಸಮವಸ್ತ್ರ ವಿತರಣೆಯಾಗಬೇಕು. ಬಿಸಿಯೂಟ ಯೋಜನೆ ಕ್ರಮ ಬದ್ಧಗೊಳ್ಳಬೇಕು. ರಾಜ್ಯ ಶಿಕ್ಷಣ ನೀತಿಯ ಪ್ರಕಾರ ಪಠ್ಯಕ್ರಮ ಬದಲಾಗಬೇಕು. ಸರ್ಕಾರಿ ಶಾಲೆಗಳಲ್ಲಿ ಮೇಲ್ಪಾವಣಿ ಕುಸಿದು ಕೆಲವೆಡೆ ಅವಘಡಗಳಾಗಿವೆ. ಶಾಲೆಗಳಿಗೆ ಕಟ್ಟಡ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲ ಸೌಲಭ್ಯಗಳ ಕೊರತೆ ಗಂಭೀರವಾಗಿದೆ. ಅವುಗಳತ್ತ ಗಮನ ಹರಿಸಬೇಕಿತ್ತು.

ಈ ಹಿಂದೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾಗಿದ್ದ ಮಧು

3ನೇಯ ಪುಟಕ್ಕೆ

ತುಂಗಭದ್ರಾ ಅಣೆಕಟ್ಟೆಯಲ್ಲಿ ಐತಿಹಾಸಿಕ ಕ್ಷಣ: ಇಂದು ನೂತನ ಕ್ರೆಸ್ಟ್‌ಗೇಟ್‌ಗಳ ಉದ್ಘಾಟನೆ

ಮೂರೂ ರಾಜ್ಯಗಳ ಸಿಎಂಗಳ ಸಂಗಮ

ವಿಜಯನಗರ: ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಜೀವನಾಡಿಯಾಗಿರುವ ತುಂಗಭದ್ರಾ ಅಣೆಕಟ್ಟೆಯಲ್ಲಿ ನೂತನವಾಗಿ ಅಳವಡಿಸಲಾದ 33 ಕ್ರೆಸ್ಟ್‌ಗೇಟ್‌ಗಳ ಉದ್ಘಾಟನೆ ನಾಳೆ (ಗುರುವಾರ) ನಡೆಯಲಿದ್ದು, ಈ ಕಾರ್ಯಕ್ರಮ ಐತಿಹಾಸಿಕ ಮಹತ್ವ ಪಡೆದುಕೊಂಡಿದೆ.



ಮೂರೂ ರಾಜ್ಯಗಳ ಮುಖ್ಯಮಂತ್ರಿಗಳು ಒಂದೇ ವೇದಿಕೆಯಲ್ಲಿ ಭಾಗವಹಿಸಲಿದ್ದು, ತುಂಗಭದ್ರಾ ಅಣೆಕಟ್ಟೆ ಮತ್ತೊಮ್ಮೆ ರಾಷ್ಟ್ರದ ಗಮನ ಸೆಳೆಯುತ್ತಿದೆ. ಮುನಿರಾಬಾದ್‌ನ ಸರ್ಕಾರಿ ಪ್ರೌಢಶಾಲೆ ಮೈದಾನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನೇತೃತ್ವ ವಹಿಸಲಿದ್ದು, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು, ಕೇಂದ್ರದ ಹಲವು ಸಚಿವರು ಮತ್ತು ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಅಣೆಕಟ್ಟೆ ಮೇಲೆಯೇ ಮೊದಲು ನೂತನ ಕ್ರೆಸ್ಟ್‌ಗೇಟ್‌ಗಳ ಉದ್ಘಾಟನೆ ನೆರವೇರಲಿದ್ದು, ಬಳಿಕ ವೇದಿಕೆ ಕಾರ್ಯಕ್ರಮ ನಡೆಯಲಿದೆ. ನಂತರ ತ'ಂಂಗ'ಭ'ದ್ರಾ ಜಲಾಶಯದ ಹೂಳು ತ'ೆರ'ವ'ು, ಸ'ವ'ಾನಾಂತ'ರ' ಜಲಾ'ಶ'ಯ'ು ನಿ'ವ'ರ್ಾ'ಣ ಸೇರಿದಂತೆ ಪ್ರಮುಖ ಜಲಸಂಪನ್ಮೂಲ ಯೋಜನೆಗಳ ಕುರಿತು ಉನ್ನತ ಮಟ್ಟದ ಸಭೆ ನಡೆಯುವ ಸಾಧ್ಯತೆಯಿದೆ.

19ನೇ ಗೇಟ್ ಕೊಚ್ಚಿಹೋದ ಘಟನೆ ಬಳಿಕ ಮಹತ್ವದ ಕ್ರಮ: 2024ರ ಆಗಸ್ಟ್ 10ರಂದು ರಾತ್ರಿ ತುಂಗಭದ್ರಾ ಅಣೆಕಟ್ಟೆಯ 19ನೇ ಕ್ರೆಸ್ಟ್‌ಗೇಟ್ ಕೊಚ್ಚಿಕೊಂಡು ಹೋಗಿದ್ದ ಘಟನೆ ದೇಶಾದ್ಯಂತ ಆತಂಕ ಸೃಷ್ಟಿಸಿತ್ತು. ಪರಿಣಾಮವಾಗಿ ಅಪಾರ ಪ್ರಮಾಣದ ನೀರು ನದಿಗೆ ಹರಿದು ಹೋಗಿದ್ದು, ರೈತರಲ್ಲಿ ಕಳವಳ ಮೂಡಿಸಿತ್ತು.

ಈ ಘಟನೆ ನಡೆದ ತಕ್ಷಣ ಅಂದಿನ ಜಲಸಂಪನ್ಮೂಲ ಸಚಿವರಾಗಿದ್ದ ಡಿ.ಕೆ. ಶಿವಕುಮಾರ್ ಸ್ಥಳಕ್ಕೆ ಭೇಟಿ ನೀಡಿ ತುರ್ತು ಕ್ರಮ ಕೈಗೊಂಡಿದ್ದರು. ತಜ್ಞರ ಸಲಹೆ ಮೇರೆಗೆ ಸ್ಟಾಪ್‌ಲಾಗ್ ಗೇಟ್ ಅಳವಡಿಸಿ ನೀರಿನ ಹರಿವನ್ನು ನಿಯಂತ್ರಿಸಲಾಗಿತ್ತು. ಆದಾಗ್ಯೂ ಸುಮಾರು 35 ಟಿಎಂಸಿ ಅಡಿ ನೀರು ನದಿಗೆ ಹರಿದು ಹೋಗಿತ್ತು. ನಂತರ ಸರ್ಕಾರ ಎಲ್ಲ 33 ಕ್ರೆಸ್ಟ್‌ಗೇಟ್‌ಗಳನ್ನು ಬದಲಿಸುವ ಮಹತ್ವದ ನಿರ್ಧಾರ ಕೈಗೊಂಡಿತ್ತು.

70 ವರ್ಷಗಳ ಬಳಿಕ ಸಂಪೂರ್ಣ ಗೇಟ್ ಬದಲಾವಣೆ 1945ರಲ್ಲಿ ಆರಂಭಗೊಂಡ ತುಂಗಭದ್ರಾ ಅಣೆಕಟ್ಟೆ ನಿರ್ಮಾಣ ಕಾಮಗಾರಿ 1953ರಲ್ಲಿ ಪೂರ್ಣಗೊಂಡಿತ್ತು. 1953ರಿಂದ 1958ರ ಅವಧಿಯಲ್ಲಿ ಅಳವಡಿಸಲಾದ ಕ್ರೆಸ್ಟ್‌ಗೇಟ್‌ಗಳು ಸುಮಾರು ಏಳು ದಶಕಗಳ ಕಾಲ ಸಮರ್ಥವಾಗಿ ಕಾರ್ಯನಿರ್ವಹಿಸಿದ್ದವು. ಇದೀಗ ಮೊದಲ ಬಾರಿಗೆ ಎಲ್ಲ 33 ಗೇಟ್‌ಗಳನ್ನು ಸಂಪೂರ್ಣವಾಗಿ ಬದಲಿಸಿ ನೂತನ ಗೇಟ್‌ಗಳನ್ನು ಅಳವಡಿಸಲಾಗಿದೆ.

ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ: ಉದ್ಘಾಟನೆಗೆ ಮುನ್ನ ಬಿಡುಗಡೆ ಮಾಡಿದ ವಿಡಿಯೊ ಸಂದೇಶದಲ್ಲಿ ಡಿ.ಕೆ. ಶಿವಕುಮಾರ್ ಅವರು ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ. ಸರ್ಕಾರ ನುಡಿದಂತೆ ನಡೆದುಕೊಂಡಿದೆ. ರೈತರ ಹಿತದೃಷ್ಟಿಯಿಂದ ತುಂಗಭದ್ರಾ ಅಣೆಕಟ್ಟೆಯ ಎಲ್ಲಾ ಕ್ರೆಸ್ಟ್‌ಗೇಟ್‌ಗಳನ್ನು ಬದಲಿಸಿ ಹೊಸ ಗೇಟ್‌ಗಳನ್ನು ಅಳವಡಿಸಲಾಗಿದೆ ಎಂದು ಹೇಳಿದ್ದಾರೆ.

ಭದ್ರತಾ ಸಿದ್ಧತೆ ಪೂರ್ಣ: ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮುನಿರಾಬಾದ್ ಹಾಗೂ ಅಣೆಕಟ್ಟೆ ಪ್ರದೇಶದಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ. ಸಾವಿರಾರು ರೈತರು, ಸಾರ್ವಜನಿಕರು ಮತ್ತು ವಿವಿಧ ಜಿಲ್ಲೆಗಳ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

3ನೇಯ ಪುಟಕ್ಕೆ

ಎ. ವಸಂತಕುಮಾರ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡಲು ಹನುಮಂತಪ್ಪ ಮನ್ನಾಪುರಿ ಒತ್ತಾಯ

ದೇವದುರ್ಗ,ಜೂ.24-

ಮುಖ್ಯಮಂತ್ರಿ ಡಿ.ಕೆ. ಶಿವ ಕುಮಾರ ನೇತೃತ್ವದ ಸಚಿವ ಸಂಪುಟದಲ್ಲಿ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಅವರನ್ನು ಮುಂದಿನ ದಿನಗಳಲ್ಲಿ ಸಂಪುಟ ದರ್ಜೆಯ ಸಚಿವರನ್ನಾಗಿ ನೇಮಿಸಬೇಕೆಂದು ಮಾದಿಗ ಮೀಸಲಾತಿ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಹನುಮಂತಪ್ಪ ಮನ್ನಾಪುರಿ ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು ಜಿಲ್ಲೆಯವರಾದ ಎ. ವಸಂತಕುಮಾರ ಅವರು ಕಲ್ಯಾಣ ಕರ್ನಾಟಕದ ಮಾದಿಗ ಸಮಾಜದ ಸರಳ, ಪ್ರಾಮಾಣಿಕ



ಮತ್ತು ಶಿಸ್ತಿನ ರಾಜಕಾರಣಿ ಎಂದು ಬಣ್ಣಿಸಿದರು.

ಸುಮಾರು 40 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸುತ್ತಿರುವ ಅವರು, ಎರಡು ಬಾರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ, ಕೆ.ಪಿ.ಸಿ.ಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಪ್ರಸ್ತುತ ರಾಜ್ಯ ಕಾರ್ಯಾಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಬಾಗಲಕೋಟೆ ಉಪಚುನಾವಣೆ ಮತ್ತು ತಮಿಳುನಾಡಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಉಸ್ತುವಾರಿಯಾಗಿ ಪಕ್ಷದ ಗೆಲುವಿಗೆ ಶ್ರಮಿಸಿದ್ದಾರೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕದಲ್ಲಿ ಮಾದಿಗ ಸಮಾಜದ ಪ್ರತಿನಿಧಿಯಾಗಿ ಪ್ರಸ್ತುತ ವಿಧಾನ ಪರಿಷತ್ತಿನಲ್ಲಿ ಎ. ವಸಂತಕುಮಾರ ಒಬ್ಬರೇ ಇದ್ದಾರೆ. ಈ ಸಮಾಜ ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಹಿಂದುಳಿದಿರುವುದರಿಂದ ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಹನುಮಂತಪ್ಪ ಮನ್ನಾಪುರಿ ಒತ್ತಾಯಿಸಿದರು.

ಎ. ವಸಂತಕುಮಾರ ಮಾದಿಗರಲ್ಲ ಎಂದು ಕೆಲವರು ಪತ್ರಿಕಾ ಹೇಳಿಕೆ ನೀಡಿರುವ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಹನುಮಂತಪ್ಪ ಮನ್ನಾಪುರಿ, ಎ. ವಸಂತಕುಮಾರ ಅವರು ಹುಟ್ಟಿನಿಂದಲೂ ಮಾದಿಗ ಸಮಾಜಕ್ಕೆ ಸೇರಿದವರು. ಅವರ ತಂದೆ ಆರ್. ಆಂಜಿನೇಯಲು ಅವರು ಕೂಡ ಕಾಂಗ್ರೆಸ್ ಜಿಲ್ಲಾಧ್ಯಕ್ಷರಾಗಿ ಮಾದಿಗ ಸಮಾಜದ ಪರ ದುಡಿದಿದ್ದಾರೆ. 40 ವರ್ಷಗಳಿಂದ ಅವರು ಸಮಾಜದ ಪರ ಹೋರಾಡುತ್ತಾ ಬಂದಿದ್ದಾರೆ. ಈಗ ಸ್ಥಾನಮಾನ ಪಡೆಯುವ ಸಮಯದಲ್ಲಿ ಅವರನ್ನು ಅಪಪ್ರಚಾರ ಮಾಡಲು ಇಂತಹ

3ನೇಯ ಪುಟಕ್ಕೆ

ಪರಿಷ್ಕೃತ ವೇತನ ಜಾರಿಗೆ ಆಗ್ರಹಿಸಿ ಸಮಾಜ ಕಲ್ಯಾಣ ಇಲಾಖೆಗೆ ಮನವಿ



ರಾಯಚೂರು,ಜೂ.24-

ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆಯು 22-05-2026ರಂದು ಹೊರಡಿಸಿರುವ ಪರಿಷ್ಕೃತ ಏಕರೂಪದ ಕನಿಷ್ಠ ವೇತನ ಅಧಿಸೂಚನೆಯನ್ನು ತಕ್ಷಣದಿಂದಲೇ ಜಾರಿಗೊಳಿಸಿ, ಕ್ರೈಸ್ ವಸತಿ ಶಾಲೆಗಳು ಹಾಗೂ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ಡಿ ಗ್ರೂಪ್ ಕಾರ್ಮಿಕರಿಗೆ ಬಾಕಿ ವೇತನ ಸಮೇತ ಪಾವತಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ಕ್ರೈಸ್ ವಸತಿ ಶಾಲೆ ಹೊರಗುತ್ತಿಗೆ ಡಿ ಗ್ರೂಪ್ ನೌಕರರ ಸಂಘ (), ರಾಯಚೂರು ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಗೆ ಮನವಿ ಸಲ್ಲಿಸಲಾಯಿತು.

ನಗರದ ಜಿಲ್ಲಾ ಉಪ ನಿರ್ದೇಶಕರ ಕಚೇರಿಯಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ವ್ಯವಸ್ಥಾಪಕರಾದ ರವಿ ಕುಮಾರ ಎಂ ಅವರ ಮೂಲಕ ಮನವಿ ಸಲ್ಲಿಸಲಾಯಿತು.

ಸಂಘದ ಪದಾಧಿಕಾರಿಗಳು ಮಾತನಾಡಿ, ಸರ್ಕಾರವು ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಸ್ವಾಯತ್ತ ಹಾಗೂ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ

3ನೇಯ ಪುಟಕ್ಕೆ

ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗೆ ನಿಯೋಜಿಸುವ ಕರಡು ನಿಯಮಗಳಿಗೆ ವಿರೋಧ: ಅವೈಜ್ಞಾನಿಕ ಕ್ರಮ ಎಂದು ನರಸಪ್ಪ ಭಂಡಾರಿ ಆಕ್ರೋಶ

ರಾಯಚೂರು,ಜೂ.24-

ಒಂಬತ್ತು ಮತ್ತು ಹತ್ತನೇ ತರಗತಿಗಳ ಪಾಠ ಬೋಧನೆಗಾಗಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರನ್ನು ನಿಯೋಜಿಸುವ ಕುರಿತು ಸರ್ಕಾರ ಹೊರಡಿಸಿರುವ ಕರಡು ನಿಯಮಗಳು-2026 ಅವೈಜ್ಞಾ ನಿಕವಾಗಿದ್ದು, ತಕ್ಷಣವೇ ಹಿಂಪಡೆಯಬೇಕು ಎಂದು ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ನರಸಪ್ಪ ಭಂಡಾರಿ ಒತ್ತಾಯಿಸಿದರು.

ನಗರದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಈ ಕ್ರಮದಿಂದ ಸರ್ಕಾರಿ ಮತ್ತು ಅನುದಾನಿತ ಪಿಯು



ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಬಡ, ಗ್ರಾಮೀಣ, ಪರಿಶಿಷ್ಟ ಜಾತಿ, ಪಂಗಡ ಹಾಗೂ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ಧಕ್ಕೆಯಾಗಲಿದೆ ಎಂದು ಹೇಳಿದರು.

ನೀಟ್, ಜೆಇಇ, ಸಿಇಟಿ ಸೇರಿದಂತೆ ರಾಷ್ಟ್ರಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಗೆ ವಿದ್ಯಾರ್ಥಿಗಳು ಪಿಯು ಉಪನ್ಯಾಸಕರ ಮೇಲೆಯೇ ಅವಲಂಬಿತರಾಗಿದ್ದು, ಉಪನ್ಯಾಸಕರನ್ನು ಪ್ರೌಢಶಾಲೆಗಳಿಗೆ ನಿಯೋಜಿಸಿದರೆ ಕಾಲೇಜುಗಳಲ್ಲಿನ ಬೋಧನಾ ಗುಣಮಟ್ಟ ಕುಸಿಯಲಿದೆ ಎಂದು ಆತಂಕ ವ್ಯಕ್ತಪಡಿಸಿದರು. ಇದರಿಂದ ಗ್ರಾಮೀಣ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ದೊರೆಯದೇ ಅವರ ಭವಿಷ್ಯ ಹಿನ್ನಡೆಯಾಗುವ ಸಾಧ್ಯತೆ ಇದೆ ಎಂದರು.

ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದ್ದರೆ ಸರ್ಕಾರ ನೇರ ನೇಮಕಾತಿ ಅಥವಾ ಪರ್ಯಾಯ ವ್ಯವಸ್ಥೆ ಕೈಗೊಳ್ಳಬೇಕು. ಪಿಯು ಉಪನ್ಯಾಸಕರ ಸ್ವತಂತ್ರ ಅಸ್ತಿತ್ವಕ್ಕೆ ಧಕ್ಕೆ ತರುವ ನೀತಿಗಳನ್ನು ಅನುಸರಿಸಬಾರದು ಎಂದು ಅವರು ಹೇಳಿದರು.

ಯಾವುದೇ ತೀರ್ಮಾನ ಕೈಗೊಳ್ಳುವ ಮುನ್ನ ಶಿಕ್ಷಣ ತಜ್ಞರು, ಪ್ರಗತಿಪರ ವಲಯ ಮತ್ತು ಸಂಘಟನೆಗಳೊಂದಿಗೆ ಚರ್ಚೆ ನಡೆಸಿ ವರದಿ ಆಧರಿಸಿ ನಿರ್ಧಾರ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಒಟ್ಟು 205 ಪಿಯು ಕಾಲೇಜುಗಳಿದ್ದು, ಅವುಗಳಲ್ಲಿ 52 ಸರ್ಕಾರಿ, 7 ಅನುದಾನಿತ ಹಾಗೂ 146 ಖಾಸಗಿ ಕಾಲೇಜುಗಳಿವೆ. ಸರ್ಕಾರಿ ಕಾಲೇಜುಗಳಲ್ಲಿ 43 ಪ್ರಾಚಾರ್ಯರ ಹುದ್ದೆಗಳು ಹಾಗೂ ವಿವಿಧ ವಿಷಯಗಳ 90ಕ್ಕೂ ಹೆಚ್ಚು ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ ಎಂದು ತಿಳಿಸಿದರು. ಜಿಲ್ಲೆಗೆ 280 ಅತಿಥಿ ಉಪನ್ಯಾಸಕರ ಅಗತ್ಯವಿದ್ದರೂ ಸರ್ಕಾರ 173 ಮಂದಿಯನ್ನು ಮಾತ್ರ ನಿಯೋಜಿಸಿದೆ ಎಂದು ಹೇಳಿದರು.

ಈ ಎಲ್ಲ ಸಮಸ್ಯೆಗಳ

3ನೇಯ ಪುಟಕ್ಕೆ

ಜೂ.25: ರೈಲ್ವೆ ಪರೀಕ್ಷೆ ವಿರೋಧಿಸಿ ಪ್ರತಿಭಟನೆ ತಾತ್ಕಾಲಿಕ ಹಿಂದಕ್ಕೆ-ವಿನೋದರೆಡ್ಡಿ

ರಾಯಚೂರು,ಜೂ.24-

ರೈಲ್ವೆ ಪದೋನ್ನತಿ ಪರೀಕ್ಷಾರ್ಥಿಗಳ ಭವಿಷ್ಯ, ಅವರ ಸೇವಾ ಹಿತಾಸಕ್ತಿ ಹಾಗೂ ಪದೋನ್ನತಿ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ರಕ್ಷಣಾ ವೇದಿಕೆ ಜೂನ್ 25ರಂದು ಘೋಷಿಸಿದ್ದ ಪ್ರತಿಭಟನೆ ಮತ್ತು ಪರೀಕ್ಷಾ ಕೇಂದ್ರಗಳ ಮುತ್ತಿಗೆ ಕಾರ್ಯಕ್ರಮವನ್ನು ತಾತ್ಕಾಲಿಕವಾಗಿ ಹಿಂದಕ್ಕೆ ಪಡೆಯಲಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ವಿನೋದರೆಡ್ಡಿ ಎಂ ಅವರು ಹೇಳಿದರು.



ಕರ್ನಾಟಕದ ನೆಲದಲ್ಲಿ ಕನ್ನಡವನ್ನು ನಿರಾಕರಿಸಿ ಕೇವಲ ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಪದೋನ್ನತಿ ಪರೀಕ್ಷೆ ನಡೆಸಲು ಮುಂದಾಗಿರುವ ರೈಲ್ವೆ ಇಲಾಖೆಯ ಕ್ರಮದ ವಿರುದ್ಧ ಜೂನ್ 25ರಂದು ಹುಬ್ಬಳ್ಳಿ, ಮೈಸೂರು, ಬೆಂಗಳೂರಿನ ಪರೀಕ್ಷಾ ಕೇಂದ್ರಗಳ ಮುಂದೆ ಕರ್ನಾಟಕ ರಕ್ಷಣಾ ವೇದಿಕೆ ಭಾರೀ ಸ್ವರೂಪದ ಹೋರಾಟವನ್ನು ಹಮ್ಮಿಕೊಂಡಿತ್ತು. ಅಲ್ಲದೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ರೈಲು ತಡೆಯೂ ಸೇರಿದಂತೆ ವ್ಯಾಪಕ ಚಳವಳಿಯನ್ನು ನಡೆಸಲು ಉದ್ದೇಶಿಸಿತ್ತು. ಆದರೆ ಈ ಘೋಷಣೆಯ ನಂತರ ನೂರಾರು ರೈಲ್ವೆ ನೌಕರರು, ಪರೀಕ್ಷಾರ್ಥಿಗಳು ಮತ್ತು ಅವರ ಕುಟುಂಬದ ಸದಸ್ಯರು ದೂರವಾಣಿ ಮೂಲಕ ಸಂಪರ್ಕಿಸಿ ತಮ್ಮ ಸಂಕಷ್ಟವನ್ನು ವಿವರಿಸಿದ್ದಾರೆ.

ಅವರ ಮನವಿಯ ಸಾರಾಂಶವೇನೆಂದರೆ, ಈ ಬಾರಿ ನಡೆಯಲಿರುವ ಗೂಡ್ಸ್ ಟ್ರೇನ್ ಮ್ಯಾನೇಜರ್ ಹುದ್ದೆಯ ಪದೋನ್ನತಿ ಪರೀಕ್ಷೆಗೆ ಪ್ರಸ್ತುತ ಸುಮಾರು 200ಕ್ಕೂ ಕಡಿಮೆ ನೌಕರರು ಮಾತ್ರ ಅರ್ಹತೆ ಪಡೆದಿದ್ದಾರೆ. ಇವರಲ್ಲಿ ಬಹುಪಾಲು ಮಂದಿ ಕರ್ನಾಟಕದಲ್ಲಿ ಸೇವೆ

3ನೇಯ ಪುಟಕ್ಕೆ

ತುಂಗೆಯ ಅಂಗಳದಲ್ಲಿ ಹಬ್ಬದ ಸಂಭ್ರಮ: ಟಿಬಿ ಡ್ಯಾಮ್, ಮುನಿರಾಬಾದನಲ್ಲಿ ಖಾಕಿ ಪಡೆಯಿಂದ ಸರ್ಪಗಾವಲು

ಕೊಪ್ಪಳ, ವಿಜಯನಗರ, ಬಳ್ಳಾರಿ, ರಾಯಚೂರು ಜಿಲ್ಲೆಗಳ ಅನ್ನದಾತರ ಮೊಗದಲ್ಲಿ ಹರ್ಷ



ಕೊಪ್ಪಳ ಜೂ.24-

ಉತ್ತರ ಕರ್ನಾಟಕದ ಜೀವನದಿ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟಗಳ ಲೋಕಾರ್ಪಣೆ ಸಮಾರಂಭಕ್ಕೆ ಕ್ಷಣಗಣನೆ ಆರಂಭವಾಗಿದೆ.

ಜೂನ್ 25ರಂದು ಕಾರ್ಯಕ್ರಮ ನಿಗದಿಯಾಗಿದ್ದು, ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಗ್ರಾಮದ ಪ್ರೌಢ ಶಾಲಾ ಆವರಣದಲ್ಲಿ ಬೃಹತ್ ವೇದಿಕೆಯು ಸಿದ್ಧವಾಗುತ್ತಿದೆ.

ಈ ಕಾರ್ಯಕ್ರಮಕ್ಕೆ ಕರ್ನಾಟಕ, ತೆಲಂಗಾಣ ಮತ್ತು ಆಂಧ್ರಪ್ರದೇಶ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಸೇರುತ್ತಿರುವುದು ವಿಶೇಷತೆಯಾಗಿದೆ. ಜೊತೆಗೆ ಮೂರೂ ರಾಜ್ಯಗಳ ಸಚಿವರು, ಶಾಸಕರು, ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಸಹ ಆಗಮಿಸುತ್ತಿದ್ದಾರೆ.

ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುತ್ತಿರುವ ಮಹತ್ವದ ಈ ಕಾರ್ಯಕ್ರಮವು ಶಿಸ್ತು ಬದ್ಧವಾಗಿ ನಡೆಯುವ ದಿಶೆಯಲ್ಲಿ ಸೂಕ್ತ ಭದ್ರತೆ ಮತ್ತು ಮುನ್ನೆಚ್ಚರಿಕೆ ಕ್ರಮಗಳು ವೇಗವಾಗಿ ನಡೆಯುತ್ತಿವೆ. ರಾಜ್ಯದ ಜಲ ಸಂಪನ್ಮೂಲ ಸಚಿವರು, ತುಂಗಭದ್ರಾ ಆಣೆಕಟ್ಟಿನ ಅಚ್ಚುಕಟ್ಟು ಪ್ರದೇಶದ ಸಂಸದರು ಹಾಗೂ ಶಾಸಕರು ಹಲವು ಸಭೆಗಳನ್ನು ನಡೆಸಿ ಕಾರ್ಯಕ್ರಮದ ಸಿದ್ಧತೆಗಾಗಿ ಅಧಿಕಾರಿಗಳಿಗೆ ಮಾರ್ಗದರ್ಶನ ಮಾಡುತ್ತಿದ್ದಾರೆ. ಬಳ್ಳಾರಿ ವಲಯದ ಐಜಿಪಿ ಡಾ.ಹರ್ಷ ಪಿ ಎಸ್, ಕೊಪ್ಪಳ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ ಜೊತೆಗೆ ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಒಗ್ಗೂಡಿ, ಅಧಿಕಾರಿಗಳೊಂದಿಗೆ ಈಗಾಗಲೇ ಹತ್ತಾರು ಸುತ್ತಿನ ಸಭೆಗಳನ್ನು ನಡೆಸಿ, ಹಲವಾರು ನಿರ್ದೇಶನಗಳನ್ನು ನೀಡಿ ಕಾರ್ಯಪ್ರವೃತ್ತರಾಗಿದ್ದಾರೆ.

★ಐಜಿಪಿ ಹರ್ಷ ಅವರಿಂದ ಸಭೆ★ ಕಳೆದ 15 ದಿನಗಳಿಂದ ಮೇಲಿಂದ ಮೇಲೆ ಡ್ಯಾಮ್ ಪ್ರದೇಶಕ್ಕೆ ಭೇಟಿ ನೀಡುತ್ತಿರುವ

ಬಳ್ಳಾರಿ ವಲಯದ ಐಜಿಪಿ ಡಾ.ಪಿ.ಎಸ್.ಹರ್ಷ ಅವರು ಜೂನ್ 23ರಂದು ಸಹ ಮುನಿರಾಬಾದ್ ಶಾಲಾ ಮೈದಾನದಲ್ಲಿ ಕೊಪ್ಪಳ, ವಿಜಯನಗರ, ಬಳ್ಳಾರಿ ಜಿಲ್ಲೆಗಳ ಎಸ್ಪಿ, ಡಿವೈಎಸ್ಪಿ, ಸಿಪಿಐ, ಪಿಎಸ್ಐ ಸೇರಿದಂತೆ ಖಾಕಿ ಪಡೆಯೊಂದಿಗೆ ಸಭೆ ನಡೆಸಿ ಭದ್ರತಾ ಕ್ರಮಗಳಿಗೆ ಸಂಬಂಧಿಸಿದಂತೆ ಕೆಲ ಪ್ರಮುಖ ನಿರ್ದೇಶನಗಳನ್ನು ನೀಡಿದರು.

★ಸ್ವಾಗತ ಕಮಾನುಗಳು★: ಕಾರ್ಯಕ್ರಮಕ್ಕೆ ಆಗಮಿಸಲಿರುವ ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಎ ರೇವಂತ ರೆಡ್ಡಿ ಸೇರಿದಂತೆ, ಉಪ ಮುಖ್ಯಮಂತ್ರಿಗಳು, ಸಚಿವರು, ಸಂಸದರು, ಶಾಸಕರು ಮತ್ತು ಇನ್ನಿತರ ಗಣ್ಯರ ಭಾವಚಿತ್ರದ ಕಮಾನುಗಳು ಕಾರ್ಯಕ್ರಮದ ಸುತ್ತಲಿನ ಪ್ರದೇಶದಲ್ಲಿ ಹಾಗೂ ಕೊಪ್ಪಳ ಮತ್ತು ಹೊಸಪೇಟೆಯ ಪ್ರಮುಖ ರಸ್ತೆಗಳಲ್ಲಿ ಕಾಣುತ್ತಿವೆ.

★ತುಂಗೆಯ ಅಂಗಳದಲ್ಲಿ ಸಿಂಗಾರ:★ ಸಿಎಂ ಕಾರ್ಯಕ್ರಮ ಹಿನ್ನೆಲೆಯಲ್ಲಿ ತುಂಗಭದ್ರಾ ಡ್ಯಾಮನ ಸುತ್ತಲು ಸುಗಮ ರಸ್ತೆ ಸಂಚಾರಕ್ಕಾಗಿ ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ತುಂಗೆಯ ತಟದಲ್ಲಿರುವ ಹಸಿರು ಸಿರಿಯ ಗ್ರಾಮ ಮುನಿರಾಬಾದನಲ್ಲಿನ ಪ್ರಮುಖ ರಸ್ತೆಗಳನ್ನು ಅಗಲೀಕರಣಗೊಳಿಸಲಾಗಿದೆ. ಮುಖ್ಯ ರಸ್ತೆಯಲ್ಲಿನ ರಸ್ತೆ ವಿಭಜಕಗಳಿಗೆ ಸುಣ್ಣ-ಬಣ್ಣ ಬಳಿಯಲಾಗುತ್ತಿದೆ. ಮುನಿರಾಬಾದ್ ಸೇರಿದಂತೆ

ತುಂಗೆಯ ಅಂಗಳದಲ್ಲಿ ಎಲ್ಲೆಡೆ ಹಬ್ಬದ ಸಂಭ್ರಮ ಕಾಣುತ್ತಿದೆ.

★ರೈತರ ಮೊಗದಲ್ಲಿ ಸಂತಷ★: ಕೊಪ್ಪಳ, ವಿಜಯನಗರ, ಬಳ್ಳಾರಿ ಹಾಗೂ ರಾಯಚೂರು ಜಿಲ್ಲೆಯ ಸಾವಿರಾರು ಎಕರೆ ಭೂಮಿಗೆ ನೀರುಣಿಸುವ ತುಂಗಭದ್ರಾ ಜಲಾಶಯಕ್ಕೆ ಹೊಸ ಗೇಟಗಳನ್ನು ಅಳವಡಿಸಿರುವುದು ಈ ಭಾಗದ ರೈತರ ಮೊಗದಲ್ಲಿ ಸಂತಷ ಮೂಡಿಸಿದೆ. ತುಂಗಭದ್ರೆಯು ಈ ವರ್ಷವೂ ತುಂಬಿಕೊಂಡು ಈ ಭಾಗದಲ್ಲಿ ಎಂದಿನಂತೆ ಎಲ್ಲೆಡೆ ಹಸಿರು ಕಾಣಲಿ ಎಂಬುದು ಈ ನೆಲದ ಜನರ ಆಶಯವಾಗಿದೆ

ಬಳ್ಳಾರಿಯಲ್ಲಿ ಜಂಟಿ ಕಾರ್ಯಾಚರಣೆ: 7 ಬಾಲಕಾರ್ಮಿಕರ ರಕ್ಷಣೆ, ಮಾಲೀಕರ ವಿರುದ್ಧ ಪ್ರಕರಣ ದಾಖಲು



ಬಳ್ಳಾರಿ,ಜೂ.24-

ನಗರದ ವಿವಿಧ ಉದ್ದಿಮೆಗಳ ಮೇಲೆ ಮಂಗಳವಾರ ಜಂಟಿ ಜಾಗೃತ ದಳ (ಟಾಸ್ಕ್ ಫೋರ್ಸ್) ದಾಳಿ ನಡೆಸಿ, 7 ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಚೈಲ್ಡ್‌ಲೈನ್ ಸಂಸ್ಥೆಗಳ ಸಹಯೋಗದಲ್ಲಿ ಈ ದಾಳಿ ನಡೆದಿದೆ.

ಬಳ್ಳಾರಿ ನಗರದ ಬೆಂಗಳೂರು ರಸ್ತೆಯ ಕೈಗಾರಿಕಾ ಪ್ರದೇಶದಲ್ಲಿರುವ ರೈಸ್ ಮಿಲ್, ಕೃಷಿ ದಸ್ತಾನು ಉಗ್ರಾಣ, ಎಸ್.ಪಿ. ಸರ್ಕಲ್ ಹತ್ತಿರದ ಗ್ಯಾರೇಜ್, ಹೋಟೆಲ್ ಮತ್ತು ಬೇಕರಿ ಸೇರಿದಂತೆ ಸುಮಾರು 25 ಉದ್ದಿಮೆಗಳ ಮೇಲೆ ಏಕಕಾಲದಲ್ಲಿ ಪರಿಶೀಲನೆ ನಡೆಸಲಾಯಿತು.

ರಕ್ಷಿಸಲ್ಪಟ್ಟ ಒಟ್ಟು 7 ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಗಿದೆ. ಮಕ್ಕಳ ವಯಸ್ಸಿನ ದಾಖಲೆಗಳನ್ನು ಪರಿಶೀಲಿಸಿದ ನಂತರ, ಬಾಲಕಾರ್ಮಿಕ ಕಾಯ್ದೆಯಡಿ ತಪ್ಪು ಎಸಗಿದ ಮಾಲೀಕರ ವಿರುದ್ಧ ಸಂಬಧಪಟ್ಟ ಪೊಲೀಸ್ ಠಾಣೆಗಳಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದೇ ವೇಳೆ ಅಂಗಡಿ ಮತ್ತು ಉದ್ದಿಮೆಗಳ ಮಾಲೀಕರಿಗೆ ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಳ್ಳದಂತೆ ಎಚ್ಚರಿಕೆ ನೀಡಿ, ಪೋಸ್ಟರ್‌ಗಳನ್ನು ಹಂಚುವ ಮೂಲಕ ಜಾಗೃತಿ ಮೂಡಿಸಲಾಯಿತು.

ಈ ವಿಶೇಷ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಉಪತಹಶೀಲ್ದಾರ್ ಮಂಜುನಾಥ್, 2ನೇ ವೃತ್ತದ ಕಾರ್ಮಿಕ ನಿರೀಕ್ಷಕ ಪರಶುರಾಮ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ನಿರ್ದೇಶಕ ಎ. ಮೌನೇಶ್, ಎಸ್‌ಜೆಪಿಯು ಹಕ್ಕಪಡೆ ಸಿಬ್ಬಂದಿ ಲಲಿತಮ್ಮ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಹೊನ್ನೂರಪ್ಪ, ಚೈಲ್ಡ್ ಲೈನ್ ಸಿಬ್ಬಂದಿ ಕಿರಣ್, ಪ್ಯಾರಾಲೀಗಲ್ ಸ್ವಯಂಸೇವಕಿ ಲಕ್ಷ್ಮಿದೇವಿ ಹಾಗೂ ರೀಚ್ ಸಂಸ್ಥೆಯ ಹನುಮಂತಪ್ಪ ಉಪಸ್ಥಿತರಿದ್ದರು.

ಹಾವು ಕಡಿತ ನಿಯಂತ್ರಣ ಜಾಗೃತಿ, ತಂಬಾಕು ನಿಯಂತ್ರಣ ಕಾರ್ಯಕ್ರಮ



ಕೊಪ್ಪಳ ಜೂ.24-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ವಾಸವಿ ಹಿರಿಯ ಪ್ರಾಥಮಿಕ ಶಾಲೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ (ಜೂ.20ರಂದು) ಶಾಲಾ ಆವರಣದಲ್ಲಿ ''ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ'' ಕಾರ್ಯಕ್ರಮ ಹಾಗೂ ''ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮ'' ನಡೆಯಿತು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಮಾತನಾಡಿ, ಹಾವು ಕಡಿತದಿಂದ ಉಂಟಾಗುವ ಮರಣವನ್ನು ನಿಯಂತ್ರಿಸುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಭಾರತ ಹಳ್ಳಿಗಳ ದೇಶ ಶೇ. 70 ಕ್ಕಿಂತಲೂ ಹೆಚ್ಚು ಜನರು ಕೃಷಿಯಲ್ಲಿ ಅವಲಂಬಿತರಾಗಿದ್ದಾರೆ. ಭಾರತದಲ್ಲಿ ಪ್ರಮುಖ 4 ವಿಷಕಾರಿ ಹಾವುಗಳಾದ ನಾಗರಹಾವು, ಕಟ್ಟಾವು, ಕೊಳಕು ಮಂಡಲ ಹಾವು ಹಾಗೂ ಗರಗಸ ಮಂಡಲ ಹಾವು ಕಡಿತದಿಂದ ಉಂಟಾಗುವ ಸಾವುಗಳಲ್ಲಿ 90% ಅಧಿಕ ಸಾವುಗಳಿಗೆ ಕಾರಣವಾಗುತ್ತವೆ. ಈ 4 ಹಾವುಗಳ ಬಗ್ಗೆ ಎಚ್ಚರಿಗೆ ವಹಿಸಬೇಕು ನಾಗರ ಹಾವು ಬಿಟ್ಟು ಉಳಿತ 03 ವಿಷಕಾರಿ ಹಾವುಗಳು ರಾತ್ರಿವೇಳೆ ಹೆಚ್ಚು ಚಟುವಟಿಕೆಯಿಂದಿರುತ್ತವೆ. ಹಾಗಾಗಿ ರಾತ್ರಿವೇಳೆ ಹೊರಗಡೆ ಹೋಗುವಾಗ ಟಾರ್ಚ್ ಬಳಸಬೇಕು. ಮನೆ ಅಂಗಳವನ್ನು ಇಲಿ ಹೆಗ್ಗನಗಳಂತಹ ಹಾವುಗಳು ತಿನ್ನುವ ಜೀವಿಗಳಿಂದ ಮುಕ್ತವಾಗಿಸುವುದು. ಹಾವುಗಳು ತಿನ್ನುವ ಜೀವಿಗಳಿಂದ ಮುಕ್ತವಾಗಿಸುವುದು. ಮನೆಯಂಗಳ ಅಥವಾ ಹೊಲಗದ್ದೆಗಳಲ್ಲಿ ಸಾಮಾನ್ಯವಾಗಿ ತಿರುಗಾಡುವ ಸ್ಥಳಗಳಲ್ಲಿ ಗಿಡಗಂಟಿಗಳನ್ನು ಕಡಿದು ಸ್ವಚ್ಚವಾಗಿಟ್ಟುಕೊಳ್ಳುವುದು ಎಂದರು.

ಹಾವುಗಳಿರುವ ಸಾಧ್ಯತೆ ಹೆಚ್ಚಿರುವ ಸ್ಥಳಗಳಲ್ಲಿ ಕೆಲಸ ಮಾಡುವಾಗ ಶೂಗಳನ್ನು ಬಳಸುವುದು. ರಾತ್ರಿ ಮನೆಯ ಹೊರಗೆ ಹಾಗೂ ಹೊಲಗದ್ದೆಗಳಲ್ಲಿ ಮಲಗಬೇಕಾದಾಗ ನೆಲದಲ್ಲಿ ಮಲಗದೆ ಎತ್ತರ ಪ್ರದೇಶದ ಮಂಚ ಬಳಸುವುದು, ನೆಲದಲ್ಲಿ ಮಲಗಲೇ ಬೇಕೆಂದರೆ ಕಡ್ಡಾಯವಾಗಿ ಸೊಳ್ಳೆಪರದೆ ಬಳಸುವುದು ಹಾಗೂ ರೈತರು ಹೊಲದಲ್ಲಿ ದನ-ಕರಗಳಿಗೆ ಮೇವು ಹಾಗೂ ಹಸಿಹುಲ್ಲು ಕೀಳುವಾಗ ಕುಡುಗೋಲು ಬಳಸಬೇಕು. ಒಂದು ವೇಳೆ ಹಾವು ಕಚ್ಚಿದರೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ 40 ನಿಮಿಷದೊಳಗಾಗಿ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕು. ಹಾವು ಕಡೆದ ವ್ಯಕ್ತಿಯನ್ನು ಸಮಾದಾನ ಪಡಿಸಿ, ಗಾಬರಿ ಪಡಿಸಬೇಡಿ. ಹಾವಿನಿಂದ ನಿಧಾನವಾಗಿ ದೂರ ಸರಿಯಿರಿ.

ರಕ್ತಬಂಧಕಪಟ್ಟಿ ಕಟ್ಟ ಬೇಡಿ. ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಿ. ಗಾಯವನ್ನು ಕತ್ತರಿಸಬೇಡಿ, ಏನನ್ನು ಹಚ್ಚಬೇಡಿ. ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಕೊಡಿಸಿ. ನಾಟಿ ಔಷಧ ಅಥವಾ ಅಸುರಕ್ಷಿತ ಚಿಕಿತ್ಸಾ ಪದ್ದತಿಯನ್ನು ಅವಲಂಬಿಸಬೇಡಿ. ಒಟ್ಟಾರೆಯಾಗಿ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯ ಸುತ್ತ-ಮುತ್ತಲಿನ ಪ್ರದೇಶ ಸ್ವಚ್ಚತೆಯಿಂದ ಇಟ್ಟುಕೊಂಡು ಇದರ ಬಗ್ಗೆ ಇತರರಿಗೂ ಮಾಹಿತಿ ನೀಡಿ, ಜಾಗೃತರಾಗಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸಮಾಜ ಕಾರ್ಯಕರ್ತೆ ಸರಸ್ವತಿ ಅವರು ಮಾತನಾಡಿ, ತಂಬಾಕು ಸೇವನೆಯಿಂದಾಗುವ ಕ್ಯಾನ್ಸರ್ ಹೃದಯ ಸಂಬಂಧಿ ಕಾಯಿಲೆ, ಶ್ವಾಸಕೋಶದ ಕಾಯಿಲೆ, ಲಕ್ವಾ ಇತರೆ ಕಾಯಿಲೆಗಳು ಬರಬಹುದು. ಪ್ರತಿ ಸಿಗರೇಟ್, ಬೀಡಿ ಸೇವನೆಯಿಂದ 7 ನಿಮಿಷ ಆಯುಷ್ಯ ಕಡಿಮೆ ಮಾಡುತ್ತದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸುತ್ತದೆ.

ಆದ್ದರಿಂದ ಎಲ್ಲರೂ ತಂಬಾಕು ಸೇವನೆಯಿಂದ ದೂರವಿದ್ದು, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಲ್.ವಿ ಸಜ್ಜನ್, ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರು ಹಾಗೂ ಇತರೆ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಹಳೆಯ ಕುಡಿಯುವ ನೀರಿನ ಪೈಪ್‌ಲೈನ್‌ಗಳನ್ನು ತಕ್ಷಣ ದುರಸ್ತಿಗೊಳಿಸಿ: ಸಿಇಓ ಅಕ್ರಂ ಷಾ

ವಿಜಯನಗರ ,ಜೂ.24-

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಕಲುಷಿತಗೊಳ್ಳುವ ಸಾಧ್ಯತೆ ಹೆಚ್ಚಿರುವುದರಿಂದ, ಹಳೆಯ ಹಾಗೂ ಹಾನಿಗೊಳಗಾದ ಪೈಪ್‌ಲೈನ್‌ಗಳನ್ನು ಮುಂಜಾಗ್ರತಾ ಕ್ರಮವಾಗಿ ತ್ವರಿತವಾಗಿ ದುರಸ್ತಿಗೊಳಿಸಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮೊಹಮದ್ ಅಲಿ ಅಕ್ರಂ ಷಾ ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಜಲ ಜೀವನ್ ಮಿಷನ್ (ಜೆಜೆಎಂ) ಕಾಮಗಾರಿಗಳು ಹಾಗೂ ನರೇಗಾ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚರಂಡಿ ಪಕ್ಕದ ಹಾಗೂ ಹಳೆಯ ಪೈಪ್‌ಲೈನ್‌ಗಳಲ್ಲಿ ನೀರು ಕಲುಷಿತಗೊಳ್ಳುವ ಪ್ರಕರಣಗಳು ಹೆಚ್ಚಾಗಿ ಕಂಡುಬರುವುದರಿಂದ, ಇಂತಹ ಗಂಭೀರ ಘಟನೆಗಳು ಮರುಕಳಿಸದಂತೆ ಅಧಿಕಾರಿಗಳು ಅತ್ಯಂತ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ವಿವಿಧ ತಾಂತ್ರಿಕ ಕಾರಣಗಳಿಂದ ಕೊಳವೆಬಾವಿ ನೀರು ಸರಬರಾಜಿನಲ್ಲಿ ಸಮಸ್ಯೆ ಉಂಟಾದಲ್ಲಿ ತಕ್ಷಣ ದುರಸ್ತಿ ಕೈಗೊಳ್ಳಬೇಕು. ಒಂದು ವೇಳೆ ತಕ್ಷಣ ಸಮಸ್ಯೆ ಬಗೆಹರಿಸಲು ಸಾಧ್ಯವಾಗದಿದ್ದರೆ, ಗ್ರಾಮಗಳಲ್ಲಿ ಟ್ಯಾಂಕರ್ ಮೂಲಕ ಪರ್ಯಾಯ ನೀರು ಪೂರೈಕೆ ವ್ಯವಸ್ಥೆ ಕಲ್ಪಿಸಬೇಕು ಎಂದು ನಿರ್ದೇಶಿಸಿದರು.

ಮಳೆಗಾಲದಲ್ಲಿ ಜಲಮೂಲಗಳು ಕಲುಷಿತಗೊಳ್ಳುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಕಡ್ಡಾಯವಾಗಿ ನೀರನ್ನು ಕಾಯಿಸಿ ಆರಿಸಿ ಕುಡಿಯಬೇಕು. ಸಾಧ್ಯವಾದರೆ ಆರ್‌ಓ ಘಟಕಗಳ ಶುದ್ಧ ಕುಡಿಯುವ ನೀರನ್ನು ಬಳಸುವಂತೆ ಗ್ರಾಮ ಪಂಚಾಯತಿಗಳು ಹಾಗೂ ಸ್ಥಳೀಯ ಸಂಸ್ಥೆಗಳು ಗ್ರಾಮೀಣ ಭಾಗದಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.


ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕಿನ ನೆಲ್ಕುದುರೆ ಗ್ರಾಮವನ್ನು 24x7 ಶುದ್ಧ ಕುಡಿಯುವ ನೀರು ಪೂರೈಕೆ ಗ್ರಾಮ ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ, ಎಲ್ಲಾ ಮನೆಗಳಿಗೆ ನಳ ಸಂಪರ್ಕ ಕಲ್ಪಿಸುವ ಸಮೀಕ್ಷೆಯನ್ನು ಶೀಘ್ರ ಪೂರ್ಣಗೊಳಿಸಿ ಇನ್ನಷ್ಟು ಗ್ರಾಮಗಳನ್ನು 24x7 ನೀರು ಪೂರೈಕೆ ಗ್ರಾಮಗಳೆಂದು ಘೋಷಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಕಾಮಗಾರಿಗಳ ಅನುಷ್ಠಾನ ತೃಪ್ತಿಕರವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಸಿಇಓ, ಮುಂದಿನ 10 ದಿನಗಳಲ್ಲಿ ಎಲ್ಲಾ ಕಾಮಗಾರಿಗಳು ನಿರೀಕ್ಷಿತ ಪ್ರಗತಿ ಸಾಧಿಸಬೇಕು. ಇಲ್ಲವಾದಲ್ಲಿ ಸಂಬಂಧ ಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಗ್ರಾಮೀಣ ಮಟ್ಟದಲ್ಲಿ ನೀರಿನ ಗುಣಮಟ್ಟ ಪರೀಕ್ಷೆಗೆ ಫೀಲ್ಡ್ ಟೆಸ್ಟಿಂಗ್ ಕಿಟ್ () ಅಭಿಯಾನವನ್ನು ಪರಿಣಾಮಕಾರಿಯಾಗಿ ನಡೆಸಬೇಕು. ಓವರ್ ಹೆಡ್ ಟ್ಯಾಂಕ್‌ಗಳು ಹಾಗೂ ಬೋರ್‌ವೆಲ್‌ಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿ, ನಿಯಮಿತವಾಗಿ ಕ್ಲೋರಿನೇಶನ್ ಪ್ರಕ್ರಿಯೆ ನಡೆಸಬೇಕು ಎಂದು ಸೂಚಿಸಿದರು.

ಸ್ವಚ್ಛ ಭಾರತ ಮಿಷನ್ ಹಾಗೂ ಜಲ ಜೀವನ್ ಮಿಷನ್ ಅಡಿಯಲ್ಲಿ ಕೈಗೊಂಡಿರುವ 100 ದಿನಗಳ ವಿಶೇಷ ಅಭಿಯಾನದ ಗುರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಕೆ. ತಿಮ್ಮಪ್ಪ, ಅನ್ನದಾನಸ್ವಾಮಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ದೀಪಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಜೂ.25ರಂದು ತುಂಗಭದ್ರಾ ಜಲಾಶಯದ 33 ನೂತನ ಸ್ಪಿಲ್‌ವೇ ಗೇಟ್ ಲೋಕಾರ್ಪಣೆ : ರಮೇಶ ನಾಯಕ



ಕನಕಗಿರಿ.ಜೂ.24-

ಮುನಿರಾಬಾದ್‌ನಲ್ಲಿ ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಇಲಾಖೆ ಹಾಗೂ ತುಂಗಭದ್ರಾ ಮಂಡಳಿಯ ಸಹಯೋಗದೊಂದಿಗೆ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿರುವ 33 ಸ್ಪಿಲ್‌ವೇ ಗೇಟ್‌ಗಳ ಲೋಕಾರ್ಪಣೆ ಕಾರ್ಯಕ್ರಮ ಜೂ.25ರ ಗುರುವಾರ ನಡೆಯಲಿದೆ ಎಂದು ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ರಮೇಶ ನಾಯಕ ತಿಳಿಸಿದರು. ಇಲ್ಲಿನ ಬ್ಲಾಕ್ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದರು.

ಮುನಿರಾಬಾದ್‌ನ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ಆಯೋಜಿಸಲಾಗಿದೆ. ತುಂಗಭದ್ರಾ ಜಲಾಶಯದ ಸುರಕ್ಷತೆ ಮತ್ತು ನೀರು ನಿರ್ವಹಣೆಯ ದೃಷ್ಟಿಯಿಂದ ಹಳೆಯ ಗೇಟ್‌ಗಳ ಬದಲಿಗೆ ನೂತನ 33 ಸ್ಪಿಲ್‌ವೇ ಗೇಟ್‌ಗಳನ್ನು ಅಳವಡಿಸಲಾಗಿದೆ ಎಂದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಹಾಗೂ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿ.ಪಂ. ಮಾಜಿ ಸದಸ್ಯ ವಿರೇಶ ಸಮಗಂಡಿ, ಗ್ಯಾರಂಟಿ ಯೋಜನೆ ಸಮಿತಿ ಸದಸ್ಯ ನಾಗಪ್ಪ ಹುಗ್ಗಿ, ವಕ್ತಾರ ಶರಣಬಸಪ್ಪ ಭತ್ತದ, ತಾ.ಪಂ. ಮಾಜಿ ಅಧ್ಯಕ್ಷ ಬಸವಂತಗೌಡ, ಮಲ್ಲಿಕಾರ್ಜುನಗೌಡ, ನಗರ ಘಟಕ ಅಧ್ಯಕ್ಷ ರವಿ ಪಾಟೀಲ್ ಸೇರಿದಂತೆ ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ; ಅಕ್ರಮ ತಡೆಗೆ ಕಠಿಣ ಕ್ರಮ : ಎಚ್.ಎಂ.ರೇವಣ್ಣ

ಕಲಬುರಗಿ,ಜೂ.24-

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಜನರ ಆರ್ಥಿಕ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡುತ್ತಿದ್ದು, ಯೋಜನೆಗಳ ದುರುಪಯೋಗ ತಡೆದು ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ತಲುಪುವಂತೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಯೋಜನೆಗಳ ಅನುಷ್ಠಾನದ ವೇಳೆ ಪತ್ತೆಯಾದ ಅಕ್ರಮಗಳನ್ನು ತಡೆಯಲು ಸರ್ಕಾರ ಈಗಾಗಲೇ ಕ್ರಮ ಕೈಗೊಂಡಿದೆ. ತಪ್ಪಾಗಿ ವರ್ಗಾವಣೆಯಾಗಿದ್ದ ಸುಮಾರು 14ರಿಂದ 15 ಕೋಟಿ ರೂ. ಮೊತ್ತವನ್ನು ವಾಪಸ್ ಪಡೆಯಲಾಗಿದೆ. ಇನ್ನೂ ಬಾಕಿ ಇರುವ ಸುಮಾರು 100 ಕೋಟಿ ರೂ. ಮೊತ್ತದ ವಸೂಲಾತಿಗೆ ಬ್ಯಾಂಕುಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮ ಜರುಗಿಸಲಾಗುತ್ತಿದೆ



ಎಂದು ತಿಳಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ 9,156 ಮೃತ ಫಲಾನುಭವಿಗಳನ್ನು ಗುರುತಿಸಲಾಗಿದ್ದು, ಅವರ ಖಾತೆಗಳಿಗೆ ಒಟ್ಟು 4.27 ಕೋಟಿ ರೂ. ಜಮೆಯಾಗಿದೆ. ಈ ಪೈಕಿ 5,336 ಖಾತೆಗಳಲ್ಲಿ ಹಣ ವರ್ಗಾವಣೆಯನ್ನು ತಡೆಹಿಡಿಯಲಾಗಿದೆ. ಆದರೆ ಇದುವರೆಗೆ ಕೇವಲ 25.84 ಲಕ್ಷ ರೂ. ಮಾತ್ರ ವಸೂಲಾಗಿರುವುದಕ್ಕೆ ರೇವಣ್ಣ ಅಸಮಾಧಾನ ವ್ಯಕ್ತಪಡಿಸಿದರು.

ಮೃತರ ಖಾತೆಗಳಿಗೆ ಹಣ ಜಮೆಯಾಗಿರುವುದು, ಒಂದೇ ಬ್ಯಾಂಕ್ ಖಾತೆಗೆ 20ಕ್ಕೂ ಹೆಚ್ಚು ಫಲಾನುಭವಿಗಳನ್ನು ಲಿಂಕ್ ಮಾಡಿರುವುದು ಹಾಗೂ ಬ್ಯಾಂಕ್ ಖಾತೆ ಇಲ್ಲದಿದ್ದರೂ ಹಣ ವರ್ಗಾವಣೆಯಾಗಿರುವಂತಹ ಗಂಭೀರ ಲೋಪಗಳು ಪತ್ತೆಯಾಗಿವೆ ಎಂದು ಅವರು ಹೇಳಿದರು.

ಮುಂದಿನ 8ರಿಂದ 10 ದಿನಗಳೊಳಗೆ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಮನೆ ಮನೆ ಸಮೀಕ್ಷೆ ನಡೆಸಿ ಸಮಗ್ರ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಗ್ಯಾರಂಟಿ ಯೋಜನೆಗಳಡಿ ಫಲಾನುಭವಿಗಳ ಖಾತೆಗೆ ಜಮೆಯಾಗುವ ಹಣವನ್ನು ಕೆಲವು ಬ್ಯಾಂಕುಗಳು ಹಳೆಯ ಸಾಲಗಳಿಗೆ ಹೊಂದಾಣಿಕೆ ಮಾಡಿಕೊಳ್ಳುತ್ತಿರುವ ಬಗ್ಗೆ ದೂರುಗಳು ಬಂದಿವೆ. ಇದು ನಿಯಮಬಾಹಿರವಾಗಿದ್ದು, ಇಂತಹ ಕ್ರಮಗಳನ್ನು ತಕ್ಷಣ ನಿಲ್ಲಿಸುವಂತೆ ಬ್ಯಾಂಕುಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಅನ್ನಭಾಗ್ಯ ಯೋಜನೆಯಡಿ ನಿಯಮ ಉಲ್ಲಂಘಿಸಿದ 14 ನ್ಯಾಯಬೆಲೆ ಅಂಗಡಿಗಳ ಪರವಾನಗಿ ರದ್ದುಪಡಿಸಲಾಗಿದೆ. ಅಲ್ಲದೆ, 6,874 ಬೋಗಸ್ ಪಡಿತರ ಚೀಟಿಗಳನ್ನು ರದ್ದುಪಡಿಸಿ, 9,631 ಕ್ವಿಂಟಾಲ್ ಅಕ್ರಮ ಆಹಾರ ಧಾನ್ಯಗಳನ್ನು ಜಪ್ತಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಜುಲೈ 2023ರಿಂದ ಡಿಸೆಂಬರ್ 2024ರವರೆಗೆ ಅನ್ನಭಾಗ್ಯ ಯೋಜನೆಯಡಿ ಡಿಬಿಟಿ ಮೂಲಕ ₹508.72 ಕೋಟಿ ಫಲಾನುಭವಿಗಳ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಹೇಳಿದರು.

ಶಕ್ತಿ ಯೋಜನೆಯಡಿ ಸಾರಿಗೆ ಸಂಸ್ಥೆಗಳಿಗೆ ಬಿಡುಗಡೆಯಾಗಬೇಕಿದ್ದ ಬಾಕಿ ಮೊತ್ತದಲ್ಲಿ ಶೇ.80ರಷ್ಟು, ಅಂದರೆ 608 ಕೋಟಿ ರೂ. ಹಣವನ್ನು ಸರ್ಕಾರ ಬಿಡುಗಡೆ ಮಾಡಿದೆ. ಪ್ರಯಾಣಿಕರ ಬೇಡಿಕೆಗೆ ಅನುಗುಣವಾಗಿ 124 ಹೆಚ್ಚುವರಿ ಬಸ್ ಶೆಡ್ಯೂಲ್‌ಗಳನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು. ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ಸುರಕ್ಷತೆ ಹಾಗೂ ಸಾರ್ವಜನಿಕ ಸೌಲಭ್ಯಗಳ ದೃಷ್ಟಿಯಿಂದ ಪೊಲೀಸ್ ಚೌಕಿ ಮತ್ತು ನಮ್ಮ ಕ್ಲಿನಿಕ್ ಆರಂಭಿಸುವ ಕುರಿತು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದರು.

ಗ್ಯಾರಂಟಿ ಯೋಜನೆಗಳನ್ನು ಸರ್ಕಾರ ಸ್ಥಗಿತಗೊಳಿಸುತ್ತದೆ ಎಂಬ ವದಂತಿಗಳಿಗೆ ಸ್ಪಷ್ಟನೆ ನೀಡಿದ ರೇವಣ್ಣ, ''ಗ್ಯಾರಂಟಿ ಯೋಜನೆಗಳು ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ. ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳು ಎಂದಿನಂತೆ ಮುಂದುವರಿಯಲಿವೆ. ಆದರೆ ಆದಾಯ ತೆರಿಗೆ ಪಾವತಿದಾರರು ಅಥವಾ ತಪ್ಪು ಮಾಹಿತಿ ನೀಡಿ ಅನರ್ಹವಾಗಿ ಸೌಲಭ್ಯ ಪಡೆಯುತ್ತಿರುವವರನ್ನು ಗುರುತಿಸಿ ವ್ಯವಸ್ಥೆಯನ್ನು ಪಾರದರ್ಶಕಗೊಳಿಸಲಾಗುತ್ತಿದೆ. ಸಾರ್ವಜನಿಕರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ'' ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ ಸಂಕನೂರ, ಉಪಾಧ್ಯಕ್ಷ ವಿಜಯಕುಮಾರ ಕಟ್ಟಿಮನಿ, ಸೋಮಶೇಖರ ಹಿರೇಮಠ, ಸುರೇಶ್ ತಿಪ್ಪಶೆಟ್ಟಿ, ನರಸಿಂಹಲು ಕುಂಬಾರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಸಚಿವರಿಲ್ಲದೆ ಸೊರಗುತ್ತಿದೆ ಶಿಕ್ಷಣ ಇಲಾಖೆ

ಬಂಗಾರಪ್ಪ ಅವರು ಮೂರು ಹಂತದ ಪರೀಕ್ಷೆ ವ್ಯವಸ್ಥೆಗಳನ್ನು ಜಾರಿಗೆ ತಂದು ರಾಷ್ಟ್ರ ಮಟ್ಟದಲ್ಲಿ ಮಾದರಿ ಎನಿಸಿಕೊಂಡಿದ್ದರು.

ಕೆಪಿಎಸ್ ಶಾಲೆಗಳಿಗೆ ಸಿಎಸ್ಆರ್ ನಿಧಿ ಬಳಸಿ ಅಭಿವೃದ್ಧಿ ಪಡಿಸಲು ಸಾಕಷ್ಟು ಚರ್ಚೆಗಳಾಗಿದ್ದವು. ಶಿವಮೊಗ್ಗದಲ್ಲಿ ಅಧಿಕೃತವಾಗಿ ಕಾರ್ಯಕ್ರಮ ಉದ್ಘಾಟನೆಯಾಗಬೇಕಿತ್ತು. ಅಷ್ಟರಲ್ಲಿ ನಾಯಕತ್ವ ಬದಲಾವಣೆಯಾಗಿ ಸರ್ಕಾರವೂ ಬದಲಾಯಿತು. ಮೊದಲ ಹಂತದ ಸಂಪುಟ ವಿಸ್ತರಣೆಯಲ್ಲೇ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧುಬಂಗಾರಪ್ಪ ಮತ್ತು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಂಡು ಖಾತೆ ನಿರ್ವಹಣೆಗೆ ಅವಕಾಶ ಮಾಡಿಕೊಡಬಹುದು ಎಂಬ ಅಂದಾಜುಗಳಿದ್ದವು. ಆದರೆ ಲೋಕೋಪಯೋಗಿ, ಬೃಹತ್ ಕೈಗಾರಿಕೆಯಂತಹ ಖಾತೆಗಳಿಗೆ ಹಿಂದಿನ ಸಚಿವರನ್ನೇ ಮುಂದುವರಿಸಲಾಗಿದೆ. ಶಿಕ್ಷಣ, ಕೃಷಿಯಂತಹ ಖಾತೆಗಳನ್ನು ಕಡೆಗಣಿಸುವುದು ಚರ್ಚೆಗೆ ಗ್ರಾಸವಾಗಿದೆ.

ಎರಡನೇ ಹಂತ ಸಂಪುಟ ವಿಸ್ತರಣೆಯಾಗಬಹುದು. ಶಿಕ್ಷಣ ಮತ್ತು ಕೃಷಿಗೆ ಸಚಿವರ ನೇಮಕವಾಗಬಹುದು ಎಂಬ ನಿರೀಕ್ಷೆಗಳು ಇನ್ನೂ ಈಡೇರಿಲ್ಲ. ಹೊಸ ಸರ್ಕಾರ ರಚನೆಯಾಗಿ ತಿಂಗಳು ಸಮೀಪಿಸಲಾರಂಭಿಸಿವೆ. ಸಂಪುಟ ವಿಸ್ತರಣೆಯೂ ನಡೆದಿಲ್ಲ, ಪ್ರಮುಖ ಖಾತೆಗಳಿಗೆ ಸಚಿವರಿಲ್ಲದೇ ಕೆಲಸ ಕಾರ್ಯಗಳು ಕುಂಠಿತವಾಗುತ್ತಿರುವುದು ಕಂಡು ಬರುತ್ತಿದೆ.

ಎ. ವಸಂತಕುಮಾರ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡಲು ಹನುಮಂತಪ್ಪ ಮನ್ನಾಪುರಿ ಒತ್ತಾಯ

ಹೇಳಿಕೆ ನೀಡಲಾಗುತ್ತಿದೆ. ಇದು ದುರುದ್ದೇಶಪೂರಿತವಾಗಿದೆ. ಸಮಾಜದ ಜನರಿಗೆ ಎಲ್ಲವೂ ಗೊತ್ತಿದೆ ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಎಂ. ಆರ್. ಎಚ್. ಎಸ್. ತಾಲೂಕು ಪ್ರಧಾನ ಕಾರ್ಯದರ್ಶಿ ಅಬ್ರಾಹಂ ಕಮಲದಿನ್ನಿ, ಮುಖಂಡರಾದ ಮುದುರಂಗಪ್ಪ ತೊಗರಿ, ಲಕ್ಷ್ಮಣ ಮಸರಕಲ್, ವಿಜಯಕುಮಾರ ಬಲ್ಲಿದವ, ರಂಗಪ್ಪ ಚಿಕ್ಕಹೊನ್ನಕುಣಿ, ಮುದುರಂಗಪ್ಪ ಮ್ಯಾಗೇರಿ, ಅಯ್ಯಪ್ಪ ತವಗ, ಮಹಾದೇವ ಗೌರಂಪೇಟೆ ಉಪಸ್ಥಿತರಿದ್ದರು.

ಪರಿಷ್ಕೃತ ವೇತನ ಜಾರಿಗೆ ಆಗ್ರಹಿಸಿ ಸಮಾಜ ಕಲ್ಯಾಣ ಇಲಾಖೆಗೆ ಮನವಿ

ಹೊರಗುತ್ತಿಗೆ ಮತ್ತು ಒಳಗುತ್ತಿಗೆ ಕಾರ್ಮಿಕರಿಗೆ ಪರಿಷ್ಕೃತ ಕನಿಷ್ಠ ವೇತನ ಜಾರಿಗೊಳಿಸುವಂತೆ ಅಧಿಸೂಚನೆ ಹಾಗೂ ಸುತ್ತೋಲೆ ಹೊರಡಿಸಿದ್ದರೂ, ಕ್ರೈಸ್ ವಸತಿ ಶಾಲೆಗಳು ಹಾಗೂ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ ಗ್ರೂಪ್ ಕಾರ್ಮಿಕರಿಗೆ ಇನ್ನೂ ಪರಿಷ್ಕೃತ ವೇತನ ಜಾರಿಯಾಗಿಲ್ಲ ಎಂದು ಆರೋಪಿಸಿದರು.

ಸರ್ಕಾರದ ಆದೇಶದಂತೆ 22-05-2026ರಿಂದಲೇ ಪರಿಷ್ಕೃತ ವೇತನ ಜಾರಿಗೊಳಿಸಿ, ಬಾಕಿ ಮೊತ್ತವನ್ನು ಪಾವತಿಸಬೇಕು ಎಂದು ಒತ್ತಾಯಿಸಿದರು. ವೇತನ ಪರಿಷ್ಕರಣೆಯಲ್ಲಿ ಮುಖ್ಯ ಅಡುಗೆಯವರು, ಅಡುಗೆ ಸಹಾಯಕರು, ರಾತ್ರಿ ಕಾವಲುಗಾರರು ಹಾಗೂ ಸ್ವಚ್ಛತಾ ಕಾರ್ಮಿಕರಿಗೆ ನಿಗದಿಪಡಿಸಿರುವ ಹೊಸ ವೇತನ ದರಗಳನ್ನು ತಕ್ಷಣದಿಂದಲೇ ಅನ್ವಯಿಸಬೇಕು ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಬೇಡಿಕೆ ಈಡೇರದಿದ್ದಲ್ಲಿ ಕಾರ್ಮಿಕರ ಹಕ್ಕುಗಳ ರಕ್ಷಣೆಗೆ ಕಾನೂನುಬದ್ಧ ಹಾಗೂ ಪ್ರಜಾಸತ್ತಾತ್ಮಕ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸಂಘ ಎಚ್ಚರಿಸಿದೆ.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಎ. ಗಂಗಾಧರ, ಜಿಲ್ಲಾಧ್ಯಕ್ಷ ಜಿ. ಅಡವಿ ರಾವ್, ನಿರಂಜನ ಕುಮಾರ, ನಾಗಮ್ಮ, ಮೌನೇಶ, ರಾಮಯ್ಯ, ಸಂತೋಷ್ ಸಿರಿವಾರ, ಬಸವರಾಜ ಗಬ್ಬೂರು ಸೇರಿದಂತೆ ವಿವಿಧ ಕಲ್ಯಾಣ ಇಲಾಖೆಗಳ ವಸತಿ ನಿಲಯಗಳ ಕಾರ್ಮಿಕ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗೆ ನಿಯೋಜಿಸುವ ಕರಡು ನಿಯಮಗಳಿಗೆ ವಿರೋಧ: ಅವೈಜ್ಞಾನಿಕ ಕ್ರಮ ಎಂದು ನರಸಪ್ಪ ಭಂಡಾರಿ ಆಕ್ರೋಶ

ನಡುವೆಯೂ ಉತ್ತಮ ಫಲಿತಾಂಶ ನೀಡುವ ಸವಾಲು ಎದುರಿಸುತ್ತಿರುವ ಸಂದರ್ಭದಲ್ಲಿ ಸರ್ಕಾರ ಹೊಸ ನೀತಿ ತರಲು ಮುಂದಾಗಿರುವುದು ಸರಿಯಲ್ಲ. ಜೊತೆಗೆ ಪ್ರಾಚಾರ್ಯರ ಬಡ್ತಿ ವಿಚಾರದಲ್ಲೂ ವಿಳಂಬ ನೀತಿ ಅನುಸರಿಸಲಾಗುತ್ತಿದೆ ಎಂದು ಸಂಘ ಖಂಡಿಸಿತು.

ಒಂದು ವೇಳೆ ಸರ್ಕಾರ ಈ ಕರಡು ನಿಯಮಗಳನ್ನು ಹಿಂಪಡೆಯದಿದ್ದರೆ ಜುಲೈ ಮೊದಲ ವಾರದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ನಿಕ್ಕಿ ಜಾನ್ಸನ್, ಖಜಾಂಚಿ ರವಿಕುಮಾರ್ ಶರಣಪ್ಪ ಪಾಟೀಲ್, ಮಂಜುನಾಥ ಐಲಿ, ಗೋವರ್ಧನ ರೆಡ್ಡಿ ಹಾಗೂ ಜಲೀಲ್ ಅಹ್ಮದ್ ಉಪಸ್ಥಿತರಿ ದ್ದರು.

ಜೂ.25: ರೈಲ್ವೆ ಪರೀಕ್ಷೆ ವಿರೋಧಿಸಿ ಪ್ರತಿಭಟನೆ ತಾತ್ಕಾಲಿಕ ಹಿಂದಕ್ಕೆ-ವಿನೋದರೆಡ್ಡಿ

ಸಲ್ಲಿಸುತ್ತಿರುವ ಕನ್ನಡಿಗರೇ ಆಗಿದ್ದಾರೆ. ಒಂದು ವೇಳೆ ಈ ಪರೀಕ್ಷೆ ಮತ್ತೊಮ್ಮೆ ಮುಂದೂಡಲ್ಪಟ್ಟರೆ, ಮುಂದಿನ ದಿನಗಳಲ್ಲಿ ದೇಶದ ವಿವಿಧ ಭಾಗಗಳಿಂದ ಇನ್ನೂ 300ಕ್ಕೂ ಹೆಚ್ಚು ಅನ್ಯಭಾಷಿಕ ನೌಕರರು ಪರೀಕ್ಷೆಗೆ ಅರ್ಹತೆ ಪಡೆಯಲಿದ್ದು, ಕನ್ನಡಿಗರ ಬಡ್ತಿ ಅವಕಾಶಗಳು ಇನ್ನಷ್ಟು ಸಂಕೀರ್ಣವಾಗುವ ಸಾಧ್ಯತೆ ಇದೆ. ಹೀಗಾಗಿ ದಯಮಾಡಿ ಈ ಬಾರಿ ಪರೀಕ್ಷೆ ನಡೆಸಲು ಅವಕಾಶ ಕಲ್ಪಿಸಿಕೊಡಿ ಎಂಬುದಾಗಿದೆ.

ಕಳೆದ ಎರಡು ಮೂರು ದಿನಗಳಿಂದ ನೂರಾರು ರೈಲ್ವೆ ನೌಕರರು ರಾಜ್ಯಾಧ್ಯಕ್ಷರಿಗೆ ಪತ್ರ ಬರೆದಿರುವುದೂ ಅಲ್ಲದೆ, ನೋವು ಹೇಳಿಕೊಂಡಿರುವದರಿಂದ ಅವರ ಭವಿಷ್ಯದ ದೃಷ್ಟಿಯಿಂದ ಚಳವಳಿಯನ್ನು ಹಿಂದಕ್ಕೆ ಪಡೆಯಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭೋವಿ ನಿಗಮದ ಫಲಾನುಭವಿಗಳಿಗೆ ಏಳು ದಿನದೊಳಗೆ ಸೌಲಭ್ಯ ಇತ್ಯರ್ಥಗೊಳಿಸಿ : ರಾಮಪ್ಪ ಎಂ.



ಬೀದರ್,ಜೂ.24-

ಜಿಲ್ಲೆಯಲ್ಲಿ ಬಾಕಿ ಉಳಿದಿರುವ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಏಳು ದಿನಗಳೊಳಗೆ ಇತ್ಯರ್ಥಗೊಳಿಸಿ ವರದಿ ಸಲ್ಲಿಸುವಂತೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷ ರಾಮಪ್ಪ ಎಂ. ಅವರು ಸಂಬಂಧಿತ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಮುದಾಯ ಮುಖಂಡರ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭೋವಿ ಸಮುದಾಯವು ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಸಮುದಾಯ ವಾಗಿದ್ದು, ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಜೊತೆಗೆ ನಿಗಮದ ಮೂಲಕ ಎಂಟು ವಿಶೇಷ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ ಶಿಕ್ಷಣ ಮತ್ತು ಮಾಹಿತಿ ಕೊರತೆಯಿಂದಾಗಿ ಈ ಯೋಜನೆಗಳು ಸಮುದಾಯದ ಎಲ್ಲರಿಗೂ ತಲುಪುತ್ತಿಲ್ಲ ಎಂದು ಅವರು ಹೇಳಿದರು.

ಸಮುದಾಯದ ಅನೇಕ ಮಕ್ಕಳು ಶಾಲೆಯಿಂದ ಹೊರಗುಳಿದಿದ್ದು, ಶಾಲೆ ಬಿಟ್ಟ ಮಕ್ಕಳ ವಿವರಗಳನ್ನು ಸಂಗ್ರಹಿಸಿ ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗದಂತೆ ಶಿಕ್ಷಣ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಭೋವಿ ಸಮುದಾಯದವರು ಹೆಚ್ಚಾಗಿ ಕಲ್ಲು ಹಾಗೂ ಮಣ್ಣಿನ ಕೆಲಸವನ್ನು ಅವಲಂಬಿಸಿರುವುದರಿಂದ ಅರಣ್ಯ, ಪೊಲೀಸ್, ಭೂ ಮತ್ತು ಗಣಿ ಇಲಾಖೆಗಳ ಶೋಷಣೆಗೆ ಒಳಗಾಗುತ್ತಿದ್ದಾರೆ. ಸಮುದಾಯದ ಜನರು ಕಾನೂನು ಉಲ್ಲಂಘಿಸಿದರೆ ಅವರಿಗೆ ಅರಿವು ಮೂಡಿಸಿ, ಇಲಾಖೆಗಳ ಕರ್ತವ್ಯಗಳ ಬಗ್ಗೆ ಮನವರಿಕೆ ಮಾಡಬೇಕು ಎಂದು ಹೇಳಿದರು.

ಸರ್ಕಾರದ ಯೋಜನೆಗಳ ಸೌಲಭ್ಯ ಪಡೆಯಲು ಫಲಾನುಭವಿಗಳು ಬ್ಯಾಂಕುಗಳಲ್ಲಿ ತೊಂದರೆ ಅನುಭವಿಸುತ್ತಿದ್ದು, ಸರ್ಕಾರದ ಯೋಜನೆಗಳಿಗೆ ಸಿಬಿಲ್ ಸ್ಕೋರ್ ಸೆಕ್ಯೂರಿಟಿ ಹಾಗೂ ಶ್ಯೂರಿಟಿ ಕೇಳಬಾರದು ಎಂಬ ನಿಯಮ ಇದೆ. ಈ ರೀತಿಯ ಸಮಸ್ಯೆಗಳು ಎದುರಾದಲ್ಲಿ ನಿಗಮದ ವ್ಯವಸ್ಥಾಪಕರು, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವ ಹಣಾಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಭೋವಿ ಕಾಲೋನಿಗಳು ಹಾಗೂ ಹಟ್ಟಿಗಳಿಗೆ ಭೇಟಿ ನೀಡಿ ಮಹಿಳಾ ಸಂಘಗಳನ್ನು ರಚಿಸುವ ಜತೆಗೆ ವಿವಿಧ ಇಲಾಖೆಗಳ ಯೋಜನೆಗಳ ಕುರಿತು ಮಾಹಿತಿ ನೀಡಿ ಸೌಲಭ್ಯಗಳು ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಮುದಾಯದ ನಿರುದ್ಯೋಗಿ ಯುವಕ-ಯುವತಿಯರಿಗೆ ಆರ್ಥಿಕ ಸ್ವಾವಲಂಬನೆ ಕಲ್ಪಿಸುವ ಉದ್ದೇಶದಿಂದ ಚಿತ್ರದುರ್ಗ ಹಾಗೂ ಮೈಸೂರು ಜಿಲ್ಲೆಗಳಲ್ಲಿ 60 ದಿನಗಳ ಹೊಲಿಗೆ ತರಬೇತಿ ಕೇಂದ್ರಗಳನ್ನು ಪ್ರಾಯೋಗಿಕವಾಗಿ ಆರಂಭಿಸಲಾಗಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಇತರೆ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ ಮಾತನಾಡಿ, ಫಲಾನುಭವಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ನಿಗಮದ ವ್ಯವಸ್ಥಾಪಕರು ಪ್ರತಿ 15 ದಿನಗಳಿಗೊಮ್ಮೆ ಜಿಲ್ಲಾಧಿಕಾರಿ ಅಥವಾ ಜಿಲ್ಲಾ ಪಂಚಾಯತ್ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು ಎಂದು ತಿಳಿಸಿದರು. ಸಭೆಯ ಬಳಿಕ ವಿವಿಧ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳಿಗೆ ಚೆಕ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕ ಶಿವಸ್ವಾಮಿ ಹಾಗೂ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಪ್ರೇಮಸಾಗರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ನಗರ-ಗ್ರಾಮೀಣದ ಪ್ರತಿ ಮಗುವಿಗೂ ತಲುಪಲಿ ಪೋಲಿಯೋ ಲಸಿಕೆ -ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್



ಬಳ್ಳಾರಿ,ಜೂ.24-

ಪೋಲಿಯೋ ನಿರ್ಮೂಲನೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ವಹಿಸುವಂತಿಲ್ಲ. ಗ್ರಾಮೀಣ ಮತ್ತು ನಗರ ಪ್ರದೇಶದ ಪ್ರತಿಯೊಂದು ಮಗುವಿಗೂ ಲಸಿಕೆ ತಲುಪಬೇಕು. ಈ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ ಇರುವ ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಪೋಲಿಯೋ ಲಸಿಕೆ ಹಾಕಬೇಕು. ವಲಸೆ ಕಾರ್ಮಿಕರ ಮಕ್ಕಳು, ಇಟ್ಟಿಗೆ ಭಟ್ಟಿ, ಕಟ್ಟಡ ನಿರ್ಮಾಣ ಪ್ರದೇಶಗಳು ಮತ್ತು ತೋರಣಗಲ್ಲು ಭಾಗದ ಹೈ-ರಿಸ್ಕ್ ಪ್ರದೇಶಗಳಲ್ಲಿನ ಮಕ್ಕಳು ಬಿಟ್ಟುಹೋಗದಂತೆ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಬೇಕು ಎಂದು ಸೂಚಿಸಿದರು.

ಜೂ.27 ರಂದು ಜಿಲ್ಲೆಯ ಎಲ್ಲಾ ಶಾಲಾ ಮಕ್ಕಳಿಂದ ಲಸಿಕಾ ಕಾರ್ಯಕ್ರಮದ ಕುರಿತಾಗಿ ಅರಿವು ಜಾಥಾ ಹಮ್ಮಿಕೊಳ್ಳಬೇಕು. ಜೂನ್ 28 ರಂದು ನಿಗದಿಪಡಿಸಿದ ಬೂತ್‌ಗಳಲ್ಲಿ ಲಸಿಕೆ ಹಾಕಲಾಗುವುದು ಹಾಗೂ ನಂತರದ ದಿನಗಳಲ್ಲಿ ತಂಡಗಳು ಮನೆ ಮನೆಗೆ ಭೇಟಿ ನೀಡಿ ಮಕ್ಕಳಿಗೆ ಪೋಲಿಯೋ ಹನಿ ಹಾಕಲಿವೆ. ಸಾರ್ವಜನಿಕರು ಹಾಗೂ ಪೋಷಕರು ತಮ್ಮ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಹನಿ ಹಾಕಿಸಿ ಅಭಿಯಾನವನ್ನು ಯಶಸ್ವಿಗೊಳಿಸಬೇಕಾಗಿ ತಿಳಿಸಿದರು.

ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ಹಾಗೂ ಪ್ರಮುಖ ವೃತ್ತಗಳಲ್ಲಿ ಸಂಚಾರಿ ಲಸಿಕಾ ಕೇಂದ್ರಗಳನ್ನು ನಿಯೋಜಿಸಬೇಕು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮೈಕ್ ಪ್ರಚಾರ, ಬ್ಯಾನರ್‌ಗಳು ಮತ್ತು ಕರಪತ್ರಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಆರೋಗ್ಯ ಇಲಾಖೆಯೊಂದಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ನಗರಸಭೆ/ಪುರಸಭೆ ಹಾಗೂ ಸಾರಿಗೆ ಇಲಾಖೆಗಳು ಜಂಟಿಯಾಗಿ ಕೆಲಸ ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

★ಜಿಲ್ಲೆಯಲ್ಲಿ 1.99 ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ: ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ರಾಷ್ಟ್ರೀಯ ಲಸಿಕಾ ದಿನದ ಅಂಗವಾಗಿ ಜೂನ್ 28 ರಿಂದ ಜುಲೈ 1, 2026 ರವರೆಗೆ ಜಿಲ್ಲಾದ್ಯಂತ ವ್ಯಾಪಕ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಬಾರಿಯ ಅಭಿಯಾನದಲ್ಲಿ ಜಿಲ್ಲೆಯಾದ್ಯಂತ ಹುಟ್ಟಿನಿಂದ 5 ವರ್ಷದೊಳಗಿನ ಒಟ್ಟು 1,99,703 ಮಕ್ಕಳಿಗೆ ಪೋಲಿಯೋ ಹನಿಗಳನ್ನು ಹಾಕುವ ಬೃಹತ್ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು.

★ಒಟ್ಟು ಜನಸಂಖ್ಯೆ ಮತ್ತು ಗುರಿ:★

ಜಿಲ್ಲೆಯ ಒಟ್ಟು 16,74,739 ಜನಸಂಖ್ಯೆಯಲ್ಲಿ, 0-5 ವರ್ಷದೊಳಗಿನ 1,99,703 ಮಕ್ಕಳನ್ನು (ನಗರ ಪ್ರದೇಶದಲ್ಲಿ 76,347 ಮತ್ತು ಗ್ರಾಮೀಣ ಪ್ರದೇಶದಲ್ಲಿ 1,23,356) ಗುರುತಿಸಿ ಲಸಿಕೆ ನೀಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಿಲ್ಲಾದ್ಯಂತ ಒಟ್ಟು 977 ಲಸಿಕಾ ಬೂತ್‌ಗಳನ್ನು ಸ್ಥಾಪಿಸಲಾಗುತ್ತಿದ್ದು, ಗ್ರಾಮೀಣ ಭಾಗದಲ್ಲಿ 657 ಹಾಗೂ ನಗರ ಭಾಗದಲ್ಲಿ 320 ಬೂತ್‌ಗಳು ಕಾರ್ಯನಿರ್ವಹಿಸಲಿವೆ ಎಂದರು.

ಅಭಿಯಾನದ ಭಾಗವಾಗಿ ಜಿಲ್ಲೆಯ ಒಟ್ಟು 3,49,381 ಮನೆಗಳಿಗೆ ಸಿಬ್ಬಂದಿ ಭೇಟಿ ನೀಡಲಿದ್ದಾರೆ. ಇದರಲ್ಲಿ ನಗರ ಪ್ರದೇಶದ 1,37,502 ಹಾಗೂ ಗ್ರಾಮೀಣ ಪ್ರದೇಶದ 2,11,879 ಮನೆಗಳು ಸೇರಿವೆ. ಗುರುತಿಸಲಾದ ಒಟ್ಟು 335 ಹೈ-ರಿಸ್ಕ್ ಹಾಗೂ ವಲಸೆ ಕಾರ್ಮಿಕರ ಪ್ರದೇಶಗಳಲ್ಲಿ (ನಗರ-131, ಗ್ರಾಮೀಣ-204) ಲಸಿಕೆಯಿಂದ ಯಾವುದೇ ಮಗು ವಂಚಿತವಾಗದತೆ ನೋಡಿಕೊಳ್ಳಲು 236 ವಿಶೇಷ 'ಮನೆ-ಮನೆ ಭೇಟಿ ತಂಡಗಳನ್ನು' ನಿಯೋಜಿಸಲಾಗಿದೆ.

★ಕಾರ್ಯಪಡೆ ಮತ್ತು ಸಾರಿಗೆ ವ್ಯವಸ್ಥೆ:

ಅಭಿಯಾನವನ್ನು ಯಶಸ್ವಿಗೊಳಿಸಲು ಜಿಲ್ಲಾದ್ಯಂತ ಬೃಹತ್ ಸಿಬ್ಬಂದಿ ವರ್ಗವನ್ನು ನಿಯೋಜಿಸಲಾಗಿದೆ. 615 ಮನೆ-ಮನೆ ತಂಡಗಳು, 50 ಟ್ರಾನ್ಸಿಟ್ ತಂಡಗಳು ಮತ್ತು 15 ಮೊಬೈಲ್ ತಂಡಗಳು ಸೇರಿದಂತೆ ಒಟ್ಟು 680 ತಂಡಗಳು ಕಾರ್ಯನಿರ್ವಹಿಸಲಿವೆ. ಲಸಿಕೆ ಹಾಕಲು 1,954 ಲಸಿಕೆದಾರರು ಹಾಗೂ ಅವರ ಮೇಲ್ವಿಚಾರಣೆಗಾಗಿ 188 ಸೂಪರ್‌ವೈಸರ್‌ಗಳನ್ನು ನಿಯೋಜಿಸಲಾಗಿದೆ. ಇಡೀ ಕಾರ್ಯಕ್ರಮದ ಉಸ್ತುವಾರಿಗೆ 4 ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಇದೇ ವೇಳೆ ಜಾಗೃತಿ ಭಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತಚಿಕಿತ್ಸಕ ಡಾ.ಎನ್. ಬಸರೆಡ್ಡಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಯಾಜ್ಞವಲ್ಕ್ಯರ ಜಯಂತಿ ಅಂಗವಾಗಿ ಭಾವಚಿತ್ರದ ಭವ್ಯ ಮೆರವಣಿಗೆ



ರಾಯಚೂರು,ಜೂ.24-

ಶ್ರೀಮದ್ ಯೋಗೀಶ್ವರ ಯಾಜ್ಞವಲ್ಕ ಗುರುಗಳ ಜಯಂತೋತ್ಸವದ ಅಂಗವಾಗಿ ಇಂದು ವೈಕುಂಠ ವೀರ ದೇವಸ್ಥಾನದಿಂದ ಜವಾಹರ ನಗರ ಕೃಷ್ಣನ ಗುಡಿವರೆಗೆ ಮೆರವಣಿಗೆ ನಡೆಯಿತು.

ಯಜ್ಞವಲ್ಕ ಭಕ್ತರು ಮತ್ತು ಬ್ರಾಹ್ಮಣ ಸಮಾಜದವರು ಮೆರವ 'ಣಿಗೆಯಲ್ಲಿ ಪಾಲ್ಗೊಂಡು ದೇವರ ನಾಮ ಸ್ಮರಣೆಗಳನ್ನು ಮಾಡುತ್ತಾ ಅದ್ದೂರಿಯಾಗಿ ಜಯಂತಿ ಮೆರ ವಣಿಗೆ ಮಾಡಿದರು ಮಹಿಳೆಯರು ಭಜನೆ ಮಾಡುವ ಮೂಲಕ ದೇವರ ಸ್ತುತಿ ಮಾಡಿದರು.


ಮೊದಲಿಗೆ ವೈಕುಂಠ ವೀರ ಹನುಮಾನ್ ದೇವಸ್ಥಾನದ ಮಂದಿರದ ಅರ್ಚಕರಾದ ಚಕ್ರವರ್ತಿ ಅವರು ಯಾಜ್ಞವಲ್ಕ್ಯ ಮಹರ್ಷಿಗಳ ಭಾವಚಿತ್ರ ಮೆರವಣಿಗೆ ವಾಹನಕ್ಕೆ ಮಂಗಳಾರತಿ ಮಾಡಿದರು..

ಈ ಸಂದರ್ಭದಲ್ಲಿ ವಾಹಿನಿಯೊಂದಿಗೆ ಮಾತನಾಡಿದ ಭೀಮಾಚಾರ್ ಅವರು ಲೋಕಕಲ್ಯಾಣಕ್ಕಾಗಿ ಮಹರ್ಷಿಗಳು ಜನಿಸಿದವರು.

ಅವರು ಜೀವನದ ಪಾಠ ಹಾಕಿಕೊಟ್ಟಿದ್ದಾರೆ ಎಂದರು. ಮೆರವಣಿಗೆಯಲ್ಲಿ ಭಗವಾನ್ ಬುದ್ಧಶ್ರೀ ರಾಷ್ಟ್ರಮಟ್ಟದ ಪ್ರಶಸ್ತಿ ವಿಜೇತರಾದ ಹೆಚ್. ಅಡಿವಿರಾವ್, ನಾರಾಯಣರಾವ್, ಶ್ರೀನಿವಾಸ ದೇಸಾಯಿ ವಿನೋದ್ ಸಾಗರ್ ಅನಂತ ಆಚಾರ್ ಅಶೋಕರಾವ್, ದತ್ತಾತ್ರೇಯ ಹೆಚ್. ರಾಮಕೃಷ್ಣ ಆಲಂಪಲ್ಲಿ, ಕೃಷ್ಣ ಕುಲಕರ್ಣಿ ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಜೂ.28ರಿಂದ ಸಂಡೂರಿನಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನ



ಸಂಡೂರು/ಬಳ್ಳಾರಿ,ಜೂ.24-

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯನ್ನು ತಹಸಿಲ್ದಾರ್ ಅನಿಲ್ ಕುಮಾರ್ ಕೆ ಅವರ ಅಧ್ಯಕ್ಷತೆಯಲ್ಲಿ ತಹಶೀಲ್ದಾರ್ ಕಚೇರಿಯಲ್ಲಿ ನಡೆಸಲಾಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಪುರಸಭೆ, ಜೆಸ್ಕಾಂ, ತಾಲೂಕು ಪಂಚಾಯಿತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಾಲೂಕಿನ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಮತ್ತು ವಿಶ್ವ ಆರೋಗ್ಯ ಸಂಸ್ಥೆಯ ಲಸಿಕಾ ಕಾರ್ಯಕ್ರಮದ ಮೇಲ್ವಿಚಾರಕರು ಭಾಗವಹಿಸಿದ್ದರು.

ತಾಲೂಕು ಆರೋಗ್ಯಾಧಿಕಾರಿ ಡಾ. ವೀರೇಂದ್ರ ಕುಮಾರ್ ಮಾತನಾಡಿ, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಉದ್ದೇಶ, ಮಹತ್ವ ಹಾಗೂ ವಿವಿಧ ಇಲಾಖೆಗಳ ಸಹಭಾಗಿತ್ವದ ಅಗತ್ಯತೆಯ ಕುರಿತು ವಿವರಿಸಿದರು. ಕಾರ್ಯಕ್ರಮದ ಯಶಸ್ಸಿಗೆ ಪ್ರತಿಯೊಂದು ಇಲಾಖೆಯ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಬಳಿಕ ಮಾತನಾಡಿದ ತಹಶೀಲ್ದಾರ್ ಅನಿಲ್ ಕುಮಾರ್ ಕೆ, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಜೂನ್ 28ರಿಂದ ಜುಲೈ 1ರವರೆಗೆ ನಾಲ್ಕು ದಿನಗಳ ಕಾಲ ನಡೆಯಲಿದ್ದು, ಆರೋಗ್ಯ ಇಲಾಖೆಯೊಂದಿಗೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸೂಚಿಸಿದರು. ಯಾವುದೇ ಅಡಚಣೆ ಉಂಟಾಗದಂತೆ ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಕಟ್ಟುನಿಟ್ಟಾಗಿ ನಿರ್ವಹಿಸಬೇಕು ಎಂದು ಹೇಳಿದರು. ಆರೋಗ್ಯ ಇಲಾಖೆ ವತಿಯಿಂದ ಸಂಡೂರು ತಾಲೂಕಿನ ಗ್ರಾಮೀಣ ಹಾಗೂ ನಗರ ಪ್ರದೇಶ ಗಳನ್ನು ಒಳಗೊಂಡಂತೆ ಒಟ್ಟು 203 ಪಲ್ಸ್ ಪೋಲಿಯೋ ಬೂತ್‌ಗಳನ್ನು ಸ್ಥಾಪಿಸಲಾಗುತ್ತಿದೆ.

ಜೊತೆಗೆ, ಪ್ರಯಾಣಿಕರ ಮಕ್ಕಳ ಅನುಕೂಲ ಕ್ಕಾಗಿ ಸಂಡೂರು ಬಸ್ ನಿಲ್ದಾಣ, ತೋರಣಗಲ್ಲು ರೈಲು ನಿಲ್ದಾಣ ಹಾಗೂ ಚೋರ್ನೂರು ಬಸ್ ನಿಲ್ದಾಣಗಳಲ್ಲಿ ವಿಶೇಷ ಪಲ್ಸ್ ಪೋಲಿಯೋ ಬೂತ್‌ಗಳನ್ನು ತೆರೆಯಲಾಗುತ್ತದೆ.

ಈ ಅಭಿಯಾನದಡಿ ಸಂಡೂರು ತಾಲೂಕಿನಾದ್ಯಂತ 35,818 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಸಾರ್ವಜನಿಕರು ತಮ್ಮ ಮನೆಗಳಲ್ಲಿ ಹುಟ್ಟಿದ ಮಗುವಿನಿಂದ ಐದು ವರ್ಷದೊಳಗಿನ ಎಲ್ಲ ಮಕ್ಕಳನ್ನು ಸಮೀಪದ ಪಲ್ಸ್ ಪೋಲಿಯೋ ಕೇಂದ್ರಗಳಿಗೆ ಕರೆತಂದು ಲಸಿಕೆ ಹಾಕಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅಧಿಕಾರಿಗಳು ಮನವಿ ಮಾಡಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮದ ಪೂರ್ವಸಿದ್ಧತೆಗಳು ಹಾಗೂ ಸಮನ್ವಯ ಕ್ರಮಗಳ ಕುರಿತು ಚರ್ಚಿಸಿದರು. ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಯಾಗಿ ನಡೆಸಲು ಎಲ್ಲ ಇಲಾಖೆಗಳು ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಜೂ.25 ರಂದು ಉಚಿತ ನೇರ ಸಂದರ್ಶನ: ಉದ್ಯೋಗಾವಕಾಶ

ಬಳ್ಳಾರಿ,ಜೂ.24-

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಹಯೋಗದೊಂದಿಗೆ ಭರತ್ ಫೈನಾನ್ಷಿಯಲ್ ಇನ್‌ಕ್ಲೂಷನ್ ಲಿಮಿಟೆಡ್ ಸಂಸ್ಥೆಯು ತನ್ನಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಭರ್ತಿಗಾಗಿ ಜೂನ್ 25 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ನೇರ ಸಂದರ್ಶನವನ್ನು ಆಯೋಜಿಸಿದೆ.

ಈ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ರೀತಿಯ ಶುಲ್ಕ ಇರುವುದಿಲ್ಲಹಾಗೂ ಅರ್ಹ ಪುರುಷ ಮತ್ತು ಮಹಿಳಾ ಅಭ್ಯರ್ಥಿ ಇಬ್ಬರಿಗೂ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಸಂದರ್ಶನ ನಡೆಯುವ ಸ್ಥಳ: ಭರತ್ ಫೈನಾನ್ಷಿಯಲ್ ಇನ್‌ಕ್ಲೂಷನ್ ಲಿಮಿಟೆಡ್, ಮನೆ ನಂ. 75, ವಾರ್ಡ್ ನಂ. 33, ಸಂಜಯ ಗಾಂಧಿ ನಗರ, ಇನ್‌ಫಾಂಟ್ರಿ ರಸ್ತೆ, ಅಗ್ನಿಶಾಮಕ ಠಾಣೆ ಹತ್ತಿರ, ಬಳ್ಳಾರಿ.

ವಿದ್ಯಾರ್ಹತೆ ಪಿಯುಸಿ ಅಥವಾ ಯಾವುದೇ ಪದವಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳಿಗೆ ದ್ವಿಚಕ್ರ ವಾಹನ ಇರುವುದು ಕಡ್ಡಾಯವಾಗಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ



ತೈಲ ದರ ಬಿಕ್ಕಟ್ಟು: ಗ್ರಾಹಕನಿಗೆ ಬೆಲೆ ಏರಿಕೆಯ ಖಾಯಂ ಶಿಕ್ಷೆ?

ಕಡಿಮೆ ಕಾಸು ಕೊಟ್ಟು ಕಚ್ಚಾತೈಲ ಖರೀದಿಸುವ ಸರ್ಕಾರ, ಆ ಲಾಭವನ್ನು ನೇರವಾಗಿ ಗ್ರಾಹಕರಿಗೆ ವರ್ಗಾಯಿಸಲು ಒಂದು ಪಾರದರ್ಶಕ ವ್ಯವಸ್ಥೆ ಇಲ್ಲ ಏಕೆ? ಚುನಾವಣೆ ಹತ್ತಿರವಿದ್ದಾಗ ಮಾತ್ರ ಬೆಲೆ ಇಳಿಕೆಯಾಗುತ್ತದಲ್ಲ ಹೇಗೆ? ದೇಶದ ಅಭಿವೃದ್ಧಿಗಾಗಿ ತೆರಿಗೆ ಸಂಗ್ರಹಿಸುವುದು ತಪ್ಪಲ್ಲ, ಆದರೆ ಈಗಾಗಲೇ ಹಸಿದಿರುವವರ ಬೆನ್ನಿಗೆ ಬಂಡೆ ಹೊರಿಸುವುದು ನ್ಯಾಯವೇ? ಈ ಪ್ರಶ್ನೆಗಳಿಗೆ ಸರ್ಕಾರಗಳು ಉತ್ತರ ಕೊಟ್ಟುಬಿಡಲಿ!

ಆರ್ಥಿಕ ವ್ಯವಸ್ಥೆಯಲ್ಲಿ ಕಚ್ಚಾತೈಲವನ್ನು ಕಪ್ಪು ಚಿನ್ನ ಎಂದು ಪರಿಗಣಿಸಲಾಗುತ್ತದೆ. ಇದು ಜಗತ್ತಿನ ಸಾರಿಗೆ, ಕೈಗಾರಿಕೆ ಮತ್ತು ಸರಕು ಸಾಗಣೆಯ ಜೀವನಾಡಿ. ಈ ಜೀವನಾಡಿಯ ದರಗಳು ಇಳಿದಾಗಲೆಲ್ಲಾ, ಅದರ ಉತ್ಪನ್ನಗಳಾದ ಪೆಟ್ರೋಲ್, ಡೀಸೆಲ್, ಗ್ಯಾಸ್‌ಗಳ ದರವೂ ಕಡಿಮೆಯಾಗಬೇಕಲ್ಲವೇ ಎನ್ನುವುದು ಸಾಮಾನ್ಯರ ತರ್ಕ ಮತ್ತು ಪ್ರಶ್ನೆ. ಆದರೆ, ಕ್ರೂಡ್ ಆಯಿಲ್ ದರ ಇಳಿಯುತ್ತಿರುವ ಹೊತ್ತಿನಲ್ಲಿಯೂ ತೈಲ ಬೆಲೆ ಏರುತ್ತಿರುವುದೊಂದು ವಿರೋಧಾಭಾಸ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲದ ದರ ಬ್ಯಾರಲ್‌ಗೆ 70-80 ಡಾಲರ್‌ಗೆ ಕುಸಿದಿದೆ. ದೇಶದ ಸರ್ಕಾರಿ ಮತ್ತು ಖಾಸಗಿ ಕಂಪನಿಗಳ ಒಡೆತನದ ಪೆಟ್ರೋಲ್ ಬಂಕ್‌ಗಳು ಮಾತ್ರ ಏರಿದ ದರದಲ್ಲೇ ತೈಲ ಬಿಕರಿ ಮಾಡುತ್ತಿವೆ.

ಭಾರತವು ತನ್ನ ಇಂಧನ ಅಗತ್ಯದ ಸುಮಾರು 85% ಕ್ಕಿಂತ ಹೆಚ್ಚು ಕಚ್ಚಾತೈಲವನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತದೆ. ಸೌದಿ ಅರೇಬಿಯಾ, ಇರಾಕ್, ಅಮೆರಿಕ ಮತ್ತು ರಷ್ಯಾದಂತಹ ದೇಶಗಳಿಂದ ಬರುವ ಈ ಕಚ್ಚಾತೈಲವನ್ನು ಭಾರತದ ರಿಲಯನ್ಸ್, ಐಒಸಿ (), ಬಿಪಿಸಿಎಲ್ () ಸೇರಿದಂತೆ ಇತರೆ ದೊಡ್ಡ ಕಂಪನಿಗಳು ಬೃಹತ್ ಸಂಸ್ಕರಣಾಗಾರಗಳಲ್ಲಿ () ಸಂಸ್ಕರಿಸಿ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿಯನ್ನಾಗಿ ಪರಿವರ್ತಿಸುತ್ತವೆ. ಅಂದರೆ, ನಾವು ಆಮದು ಮಾಡಿಕೊಳ್ಳುವುದು ಕಚ್ಚಾ ರೂಪವನ್ನೇ ಹೊರತು ಅಂತಿಮ ಉತ್ಪನ್ನಗಳನ್ನಲ್ಲ ಎನ್ನುವುದು ತಿಳಿದಿರುವ ಸಂಗತಿ.

ಇನ್ನು ಈ ದೇಶದ ಗ್ರಾಹಕ ಪಾವತಿಸುವ ಬೆಲೆಯ ಸುಮಾರು 45% ರಿಂದ 50% ಭಾಗ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಧಿಸುವ ಅಬಕಾರಿ ಸುಂಕ ಮತ್ತು ಮೌಲ್ಯವರ್ಧಿತ ತೆರಿಗೆಯ () ರೂಪದಲ್ಲಿ ನೇರವಾಗಿ ಸರ್ಕಾರದ ಬೊಕ್ಕಸ ಸೇರುತ್ತದೆ. ಉದಾಹರಣೆಗೆ, ಲೀಟರ್ ಪೆಟ್ರೋಲ್ ಬೆಲೆ 100 ರೂಪಾಯಿ ಎಂದಿಟ್ಟುಕೊಳ್ಳೋಣ, ಅದರಲ್ಲಿ ಕೇವಲ 50 ರೂಪಾಯಿ ಆಸುಪಾಸಿನ ಮೊತ್ತ ಮಾತ್ರ ತೈಲದ ನಿಜವಾದ ಮೌಲ್ಯ ಮತ್ತು ಸಂಸ್ಕರಣಾ ವೆಚ್ಚ. ಉಳಿದ ಅರ್ಧದಷ್ಟು ಭಾಗವನ್ನು (ಸುಮಾರು 45-50 ರೂ.) ತೆರಿಗೆ ರೂಪದಲ್ಲಿ ಜನರಿಂದ ವಸೂಲಿ ಮಾಡಿದ ಹಣ ಸರ್ಕಾರದ ಖಜಾನೆ ಸೇರುತ್ತದೆ.

ಜಾಗತಿಕವಾಗಿ ಕಚ್ಚಾತೈಲದ ಬೆಲೆ ಏರಿದಾಗ, ಇದರಿಂದಲೇ ಬೆಲೆ ಏರಿಸುತ್ತಿದ್ದೇವೆ ಎಂದು ಹೇಳುವ ಸರ್ಕಾರ, ದರ ಇಳಿದಾಗ ಮಾತ್ರ ಸೊಲ್ಲೆತ್ತುವುದಿಲ್ಲ. ಈ ದ್ವಂದ್ವ ನೀತಿಯೇ ಜನರನ್ನ ಮೂರ್ಖರನ್ನಾಗಿ ಮಾಡುವ ಅತಿದೊಡ್ಡ ಕಳ್ಳಾಟ. 2014-15ರ ಅವಧಿಯಲ್ಲಿ ಕಚ್ಚಾತೈಲದ ದರ ಭಾರೀ ಕುಸಿದಾಗ, ಸರ್ಕಾರ ಅದರ ಲಾಭವನ್ನು ಜನರಿಗೆ ನೀಡುವ ಬದಲು, ಅಬಕಾರಿ ಸುಂಕವನ್ನು ( ) ಮತ್ತೂ ಹೆಚ್ಚಿಸಿತು. ಅಂದರೆ, ಜಾಗತಿಕವಾಗಿ ಬೆಲೆ ಇಳಿದಾಗ ಸರ್ಕಾರ ತೆರಿಗೆ ಹೆಚ್ಚಿಸಿ, ಆ ಲಾಭವನ್ನು ತನ್ನ ಬೊಕ್ಕಸಕ್ಕೆ ಬಾಚಿಕೊಂಡಿತು. ಏಕಾಏಕಿ ರೂಪಾಯಿಗಳ ಲೆಕ್ಕದಲ್ಲಿ ದರ ಏರಿಸಿ ಬಳಿಕ, ಚುನಾವಣೆ ಹತ್ತಿರವಿರುವಾಗ ಪೈಸೆ ಲೆಕ್ಕದಲ್ಲಿ ದರ ಇಳಿಕೆ ಮಾಡಿ, ಜನರಿಗೆ ಉಪಕಾರ ಮಾಡುತ್ತಿದ್ದೇವೆಂಬ ಭ್ರಮೆ ಸೃಷ್ಟಿಸಲಾಗುತ್ತಿದೆ. ಇದು ಅನ್ಯಾಯ.

ಕೇಂದ್ರ ಸರ್ಕಾರ, ಯುದ್ಧ ಶುರುವಾದಾಗಿನಿಂದ ಹಾರ್ಮುಜ್ ಜಲಸಂಧಿ ಮುಚ್ಚಿದೆ, ಯುದ್ಧದಿಂದ ತೈಲ ಕಂಪನಿಗಳು ನಷ್ಟದಲ್ಲಿವೆ ಎಂದು ಕುಂಟು ಸಬೂಬು ಹೇಳಿಕೊಂಡು ಕಳೆದ ವರ್ಷ ಹಂತ ಹಂತವಾಗಿ ಸುಮಾರು 10 ರೂಪಾಯಿಗಳಷ್ಟು ಪೆಟ್ರೋಲ್, ಡೀಸೆಲ್ ದರ ಏರಿಸಿತು. ಡಿಸೆಂಬರ್‌ನಲ್ಲಿ ಕಚ್ಚಾ ತೈಲದ ಬೆಲೆ ಬ್ಯಾರೆಲ್‌ಗೆ 63 ಡಾಲರ್ ಇತ್ತು. ಆಗ ಭಾರತದಲ್ಲಿ ಪೆಟ್ರೋಲ್ ಬೆಲೆ 94 ರೂ.ನಿಂದ 100 ರೂ. ಮಾರ್ಚ್‌ನಲ್ಲಿ ಬ್ಯಾರಲ್ ಕ್ರೂಡ್ ಆಯಿಲ್ 90 ರಿಂದ 102 ಡಾಲರ್ ತಲುಪಿತು. ಆಗಲೂ ಪೆಟ್ರೋಲ್ ಬೆಲೆ 102 ರೂ. ಇತ್ತು. ಕಚ್ಚಾತೈಲದ ಬೆಲೆ ಹೆಚ್ಚಾಗಲೀ, ಕಡಿಮೆಯಾಗಲೀ, ನಮ್ಮವರು ಮಾತ್ರ ಏರಿಸುತ್ತಲೇ ಇದ್ದಾರೆ. ಸರ್ಕಾರ ಪ್ರತಿ ಬಾರಿ ಫ್ಯೂಯಲ್ ರೇಟ್ ಹೆಚ್ಚಿಸುವಾಗ ಹೇಳುವ ಕಾರಣಗಳು ಈಗ ಹಳಸಿವೆ. ಸತ್ಯ ಏನೆಂಬುದು ಜಗಜ್ಜಾಹೀರು.

ಈಗ ಭಾರತದಲ್ಲಿ ಪೆಟ್ರೋಲ್ ಬೆಲೆ ಬರೋಬ್ಬರಿ 110-116 ರೂ. ಬ್ಯಾರಲ್ ಕಚ್ಚಾತೈಲದ ಬೆಲೆ ಸುಮಾರು 72 ಡಾಲರ್ (6,840 ರೂ). ಈಗ ಬರುತ್ತಿರುವುದಂತೂ ಎಥನಾಲ್ ಮಿಶ್ರಿತ ಪೆಟ್ರೋಲ್. ಒಂದು ಕಡೆ ವಾಹನಗಳ ಎಂಜಿನ್‌ಗಳಿಗೆ ತೊಂದರೆ, ಇನ್ನೊಂದು ಕಡೆ ಮಧ್ಯಮ ವರ್ಗದ ಜನರ ಜೇಬಿಗೆ ಕತ್ತರಿ. ಈಗ ನಮ್ಮಲ್ಲಿರುವ ಬಹುತೇಕ ದ್ವಿಚಕ್ರ ವಾಹನಗಳು ಹಳೆಯವು. ಅವು ಯಾವುವೂ 80% ಎಥನಾಲ್ ತಡೆದುಕೊಳ್ಳುವ ಶಕ್ತಿ ಹೊಂದಿಲ್ಲ. ಅಲ್ಲಿಗೆ ಕಥೆ ಮುಗಿಯಿತು!

ತೈಲ ಕಂಪನಿಗಳು () ಲಾಭಕ್ಕಾಗಿ ಕೆಲಸ ಮಾಡುತ್ತವೆ ಎನ್ನುವುದೇನೋ ನಿಜ. ಆದರೆ, ದರ ಇಳಿದಾಗ ಅವು ಏಕೆ ಲಾಭದ ಮಿತಿಯನ್ನು ಕಾಯ್ದುಕೊಳ್ಳುತ್ತವೆ? ಇಂಧನ ದರ ನಿಯಂತ್ರಿಸುವುದು ಕೇವಲ ಕಂಪನಿಗಳ ಕೆಲಸವಲ್ಲ, ಅದು ಸರ್ಕಾರದ ಹೊಣೆಗಾರಿಕೆಯೂ. ತೈಲ ದರವನ್ನು ಜಿಎಸ್‌ಟಿ () ವ್ಯಾಪ್ತಿಗೆ ತಂದರೆ ಬೆಲೆ ಅರ್ಧಕ್ಕೆ ಇಳಿಯಬಹುದು. ಆದರೆ, ಸರ್ಕಾರಗಳ ತೆರಿಗೆಯ ಹಸಿವು ಇದಕ್ಕೆ ಅಡ್ಡಿಯಾಗಿದೆ. ರಾಜ್ಯಗಳಿಗೆ ವ್ಯಾಟ್ () ಮೂಲಕ ಬರುವ ಆದಾಯ ಮತ್ತು ಕೇಂದ್ರಕ್ಕೆ ಅಬಕಾರಿ ಸುಂಕದ ಮೂಲಕ ಬರುವ ಆದಾಯವನ್ನು ಬಿಟ್ಟುಕೊಡಲು ಯಾವ ಸರ್ಕಾರವೂ ಸಿದ್ಧವಿಲ್ಲ. ಸರ್ಕಾರಗಳು ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿವೆ. ಇದರ ನೇರ ಪರಿಣಾಮ ಬೀಳುತ್ತಿರುವುದು ಸಾರಿಗೆ ವೆಚ್ಚದ ಮೇಲೆ.

ಪೆಟ್ರೋಲ್-ಡೀಸೆಲ್ ದರ ಕೇವಲ ಕಾರು, ಬೈಕುಗಳಿಗೆ ಮಾತ್ರ ಸಂಬಂಧಿಸಿದ್ದಲ್ಲ. ಡೀಸೆಲ್ ಬೆಲೆ ಏರಿದರೆ, ಲಾರಿಗಳ ಸಾಗಣೆ ವೆಚ್ಚ ಹೆಚ್ಚುತ್ತದೆ. ಸಾಗಣೆ ವೆಚ್ಚ ಹೆಚ್ಚಿದರೆ, ತರಕಾರಿ, ಹಾಲು, ದಿನಬಳಕೆಯ ವಸ್ತುಗಳ ಬೆಲೆ ಏರುತ್ತದೆ. ಅಂದರೆ, ಒಬ್ಬ ಬಡ ಕೂಲಿ ಕಾರ್ಮಿಕ ಕೂಡ ಬೆಲೆ ಏರಿಕೆಯ ಬಿಸಿಯನ್ನ ನೇರವಾಗಿ ಅನುಭವಿಸಬೇಕಾಗುತ್ತದೆ.

ಸರ್ಕಾರಗಳು ಏನೇ ಸಮರ್ಥನೆ ಕೊಟ್ಟುಕೊಳ್ಳಲಿ. ಆದರೆ, ಜನಸಾಮಾನ್ಯರ ಕೊಳ್ಳುವ ಶಕ್ತಿಯನ್ನು ಪಾತಾಳಕ್ಕೆ ತುಳಿಯುತ್ತಿರುವುದೇ ನಿಜ. ದರ ಇಳಿಸಿದರೆ ಬೊಕ್ಕಸಕ್ಕೆ ನಷ್ಟವಾಗುತ್ತದೆ ಎಂಬ ವಾದ ಬೂಟಾಟಿಕೆಯದು. ಇಂಧನ ಬೆಲೆ ಇಳಿಕೆಯಾದರೆ ದೇಶದಲ್ಲಿ ಆರ್ಥಿಕ ಚಟುವಟಿಕೆಗಳು ಹೆಚ್ಚುತ್ತವೆ, ಸರಕುಗಳ ಸಾಗಣೆ ಸುಗಮವಾಗುತ್ತದೆ. ಇದು ದೀರ್ಘಾವಧಿಯಲ್ಲಿ ಸರ್ಕಾರಕ್ಕೆ ಹೆಚ್ಚಿನ ತೆರಿಗೆಯನ್ನೇ ತಂದುಕೊಡುತ್ತದೆ. ಆದರೆ, ದೃಷ್ಟಿಕೋನ ಕೇವಲ ಲಾಭಕ್ಕೆ ಸೀಮಿತವಾದಾಗ ಇಂತಹ ಜನಪರ ಆಲೋಚನೆಗಳು, ನಿರ್ಧಾರಗಳು ಜಾರಿಗೆ ಬರುವುದಿಲ್ಲ.

ಕಡಿಮೆ ಕಾಸು ಕೊಟ್ಟು ಕಚ್ಚಾತೈಲ ಖರೀದಿಸುವ ಸರ್ಕಾರ, ಆ ಲಾಭವನ್ನು ನೇರವಾಗಿ ಗ್ರಾಹಕರಿಗೆ ವರ್ಗಾಯಿಸಲು ಒಂದು ಪಾರದರ್ಶಕ ವ್ಯವಸ್ಥೆ ಇಲ್ಲ ಏಕೆ? ಚುನಾವಣೆ ಹತ್ತಿರವಿದ್ದಾಗ ಮಾತ್ರ ಬೆಲೆ ಇಳಿಕೆಯಾಗುತ್ತದಲ್ಲ ಇದು ಹೇಗೆ? ದೇಶದ ಅಭಿವೃದ್ಧಿಗಾಗಿ ತೆರಿಗೆ ಸಂಗ್ರಹಿಸುವುದು ತಪ್ಪಲ್ಲ, ಆದರೆ ಈಗಾಗಲೇ ಹಸಿದಿರುವವರ ಬೆನ್ನ ಮೇಲೆ ಕಲ್ಲೇರುವುದು ನ್ಯಾಯವೇ? ಈ ಪ್ರಶ್ನೆಗಳಿಗೆ ಯಾರಾದರೂ ಉತ್ತರ ಕೊಟ್ಟುಬಿಡಲಿ!

ಒಂದು ದೇಶದ ಆರ್ಥಿಕತೆ ಜನಸಾಮಾನ್ಯನ ಸಂತೋಷದ ಮೇಲೆ ನಿಲ್ಲಬೇಕು. ಆಡಂಬರ ಬೇಡ, ಕನಿಷ್ಠ ಸಾಧಾರಣವಾಗಿಯಾದರೂ ನೆಮ್ಮದಿಯಾಗಿ ಬದುಕುವುದರ ಮೇಲೆ ನಿಲ್ಲಬೇಕು. ಯಾವುದೇ ಸರ್ಕಾರ ನ್ಯಾಯಪರ, ಜನಪರವಾಗಿರುವುದೇ ಆದಲ್ಲಿ ಅದು ಯಾವುದೇ ರೀತಿಯ ಹಣದುಬ್ಬರ, ದರ ಏರಿಕೆಯನ್ನು ತಮಗೆ ಬೇಕಾದ ಅಸ್ತ್ರವನ್ನಾಗಿ ಬಳಸಕೂಡದು. ಸರ್ಕಾರ ತೈಲ ಬೆಲೆ ನಿಗದಿಯಲ್ಲಿ ಪಾರದರ್ಶಕತೆ ತರಲಿ, ತೆರಿಗೆಯ ಹೊರೆ ತಗ್ಗಿಸಿ, ಜನಸಾಮಾನ್ಯನ ಬದುಕಿಗೆ ನ್ಯಾಯ ಒದಗಿಸಲಿ. ಕೇವಲ ಅಧಿಕಾರಕ್ಕಾಗಿ ದರ ಇಳಿಸುವ ಅಗ್ಗದ ರಾಜಕಾರಣವನ್ನ ಬಿಟ್ಟು, ದೇಶದ ಆರ್ಥಿಕತೆಯನ್ನು ಸ್ಥಿರಗೊಳಿಸುವ ದಿಟ್ಟತನ ಪ್ರದರ್ಶಿಸಲಿ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಅಯೋಧ್ಯೆಗೆ ಅವಮಾನ ಯಾವುದು? ಪ್ರಶ್ನೆ ಕೇಳುವುದೋ, ರಾಮಮಂದಿರ ನಿಧಿ ಲೂಟಿ ಹೊಡೆಯುವುದೋ?

ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ನ ದೇಣಿಗೆ ನಿಧಿಯಲ್ಲಿ ಆರ್ಥಿಕ ಅಕ್ರಮ ಮತ್ತು ಲೂಟಿಯ ಆರೋಪಗಳು ದೇಶದಾದ್ಯಂತ ಚರ್ಚೆಗೆ ಗ್ರಾಸವಾಗಿವೆ. ಈ ಪ್ರಕರಣವು ಇಡೀ ದೇಶವನ್ನು ಬೆಚ್ಚಿಬೀಳಿಸಿದೆ. ಇದು ಕೇವಲ ವಿರೋಧ ಪಕ್ಷಗಳ ರಾಜಕೀಯ ಟೀಕೆಗೆ ಮಾತ್ರವೇ ಸೀಮಿತವಾಗಿಲ್ಲ; ಬದಲಿಗೆ ಆಡಳಿತಾರೂಢ ಬಿಜೆಪಿ ಮತ್ತು ಸಂಘ ಪರಿವಾರದ ಅತ್ಯುನ್ನತ ಮಟ್ಟದಲ್ಲೇ ತೀವ್ರ ಆಂತರಿಕ ಭಿನ್ನಾಭಿಪ್ರಾಯ ಮತ್ತು ಬಿರುಕನ್ನು ಸಾರ್ವಜನಿಕವಾಗಿ ಬಹಿರಂಗಗೊಳಿಸಿದೆ. ಮಂದಿರದ ನಿರ್ಮಾಣ ಸಮಿತಿಯ ಮುಖ್ಯಸ್ಥರಾದ ನೃಪೇಂದ್ರ ಮಿಶ್ರಾ ಅವರೇ ಭ್ರಷ್ಟಾಚಾರ ನಡೆದಿರುವುದನ್ನು ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ.



ಈ ನಡುವೆ, ಜೂನ್ 19ರಂದು ಅಯೋಧ್ಯೆಗೆ ಭೇಟಿ ನೀಡಿದ್ದ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು, ''ಯಾವಾಗಲೆಲ್ಲ ಭಾರತವು ಸಕಾರಾತ್ಮಕ ದಿಕ್ಕಿನಲ್ಲಿ ಮುನ್ನಡೆಯುತ್ತದೆಯೋ, ಆಗೆಲ್ಲ ಸಂಚುಗಾರರು ನಿದ್ದೆಗೆಟ್ಟು ಪಿತೂರಿಗಳನ್ನು ಹೆಣೆಯಲು ಮುಂದಾಗುತ್ತಾರೆ. ಅಯೋಧ್ಯೆ ಧಾಮವನ್ನು ಮಲಿನಗೊಳಿಸಲು, ಶ್ರೀರಾಮ ಜನ್ಮಭೂಮಿಯನ್ನು ಸಂಶಯದಿಂದ ನೋಡುವಂತೆ ಮಾಡಲು ಮತ್ತು ನಮ್ಮ ಇಡೀ ಪರಂಪರೆಯನ್ನು ವಿರೋಧಿಸಲು ಈಗ ಮತ್ತದೇ ವ್ಯವಸ್ಥಿತ ಸಂಚು ನಡೆಯುತ್ತಿದೆ. ರಾಮಮಂದಿರದ ನಿಧಿ ಕುರಿತು ಪ್ರಶ್ನಿಸುವುದು ಮತ್ತು ಆರೋಪ ಮಾಡುವುದು ಅಯೋಧ್ಯೆ ಧಾಮವನ್ನು ಮತ್ತು ಇಡೀ ಪರಂಪರೆಯನ್ನು ಅವಮಾನಿಸುವ ವ್ಯವಸ್ಥಿತ ಸಂಚು'' ಎಂದು ಕರೆದಿದ್ದಾರೆ.

ಮುಂದುವರೆದು, ''ಜೂನ್ 13 ರಂದು ರಚಿಸಲಾದ ವಿಶೇಷ ತನಿಖಾ ತಂಡವು () ಇನ್ನು 15 ದಿನಗಳಲ್ಲಿ ತನ್ನ ಅಂತಿಮ ವರದಿಯನ್ನು ಸಲ್ಲಿಸಲಿದೆ. ಸತ್ಯ ಮತ್ತು ಸುಳ್ಳನ್ನು ಸಂಪೂರ್ಣವಾಗಿ ಬೇರ್ಪಡಿಸಲಿದೆ'' ಎಂದು ಅವರು ಹೇಳಿದ್ದಾರೆ.

''ನಾವು 500 ವರ್ಷಗಳ ಕಾಲ ತಾಳ್ಮೆಯಿಂದ ಕಾಯ್ದು ರಾಮ ಜನ್ಮಭೂಮಿಯನ್ನು ಮರಳಿ ಪಡೆದಿದ್ದೇವೆ. ಆದ್ದರಿಂದ ಇನ್ನು ಕೇವಲ 15 ದಿನಗಳ ಕಾಲ ಭಕ್ತರು ತಾಳ್ಮೆ ವಹಿಸಬೇಕು. ರಾಮಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಹ ಜವಾಬ್ದಾರಿರಹಿತ ಹೇಳಿಕೆಗಳನ್ನು ನೀಡಬಾರದು'' ಎಂದಿದ್ದಾರೆ.

ಯೋಗಿ ಅವರ ಮಾತುಗಳನ್ನು ಗಮನಿಸಿದರೆ, ತನಿಖೆಯಲ್ಲಿ ಯಾವುದೇ ಅಕ್ರಮ ನಡೆದಿಲ್ಲವೆಂಬ ವರದಿ ಬರಲಿದೆ ಎಂಬುದನ್ನು ಸೂಚಿಸುತ್ತಿವೆ. ಅಂದರೆ, ತಮ್ಮದೇ ಸರ್ಕಾರ, ತಮ್ಮದೇ ಪೊಲೀಸರು ತಮ್ಮವರೇ ಇರುವ ಟ್ರಸ್ಟ್‌ನಲ್ಲಿ ನಡೆದಿರುವ ಅಕ್ರಮವನ್ನು ಸಬೀತು ಮಾಡುವರೇ? ಸಾಧ್ಯವೇ ಇಲ್ಲ! ಎಂಬುದು ಅವರ ಮಾತಿನ ತಾತ್ಪರ್ಯವಿದ್ದಂತಿದೆ.

ಅದೇನೇ ಇರಲಿ, ಸದ್ಯ ಗಂಭೀರ ಆರೋಪಗಳಿವೆ. ಮುಖ್ಯವಾಗಿ, ಪ್ರಧಾನಿ ಮೋದಿಯವರ ಮೊದಲ ಅವಧಿಯ ಮುಖ್ಯ ಕಾರ್ಯದರ್ಶಿಯಾಗಿದ್ದ ಹಿರಿಯ ನಿವೃತ್ತ ಅಧಿಕಾರಿ, ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ನ ನಿರ್ಮಾಣ ಸಮಿತಿ ಮುಖ್ಯಸ್ಥ ನೃಪೇಂದ್ರ ಮಿಶ್ರಾ ಅವರು ಹಗರಣ ನಡೆದಿದೆ ಎಂಬುದನ್ನು ಒಪ್ಪಿಕೊಂಡಿದ್ದಾರೆ.

''ಮಂದಿರದ ದೇಣಿಗೆ ಎಣಿಕೆ ಕೊಠಡಿಯೊಳಗೆ ಕೆಲವು ಸಂಶಯಾಸ್ಪದ ಚಲನವಲನಗಳು ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಕೊಠಡಿಯ ಹೊರಗಿನ ಶೌಚಾಲಯದಲ್ಲಿ ನಗದು ಹಣ ಪತ್ತೆಯಾಗಿದೆ'' ಎಂದು ಅವರು ಬಹಿರಂಗಪಡಿಸಿದ್ದಾರೆ. ಈ ಘಟನೆಯನ್ನು ಮುಲಾಜಿಲ್ಲದೆ ಹಗಲು ದರೋಡೆ ಎಂದು ಕರೆದಿದ್ದಾರೆ.

''ಮಂದಿರಕ್ಕೆ ವಾರ್ಷಿಕವಾಗಿ ಸರಾಸರಿ 75 ರಿಂದ 80 ಕೋಟಿ ರೂಪಾಯಿ ದೇಣಿಗೆ ಬರುತ್ತಿದ್ದು, ಮಾಸಿಕವಾಗಿ ಗರಿಷ್ಠ 10 ರಿಂದ 12 ಕೋಟಿ ರೂ. ಸಂಗ್ರಹವಾಗುತ್ತದೆ. ಈ ಹಿನ್ನೆಲೆಯಲ್ಲಿ ಈ ಅಕ್ರಮ ಎಷ್ಟು ದಿನಗಳಿಂದ ನಡೆಯುತ್ತಿತ್ತು ಎಂಬುದರ ಕುರಿತು ಗಂಭೀರ ತನಿಖೆಯ ಅಗತ್ಯವಿದೆ'' ಎಂದು ಮಿಶ್ರಾ ಪ್ರತಿಪಾದಿಸಿದ್ದಾರೆ.

ಅಲ್ಲದೆ, ನೃಪೇಂದ್ರ ಮಿಶ್ರಾ ಅವರು ಎತ್ತಿ ತೋರಿಸಿರುವ ಆಡಳಿತಾತ್ಮಕ ಮತ್ತು ಭದ್ರತಾ ಲೋಪಗಳು ಅತ್ಯಂತ ಆಘಾತಕಾರಿಯಾಗಿವೆ. ''ಮಂದಿರದ ಒಟ್ಟಾರೆ ನಿಗಾ ವ್ಯವಸ್ಥೆಯು ಸಂಪೂರ್ಣವಾಗಿ ಶೂನ್ಯವಾಗಿತ್ತು. ಭದ್ರತಾ ಪ್ರೋಟೋಕಾಲ್‌ಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಲಾಗಿದೆ'' ಎಂದಿದ್ದಾರೆ.

''ನಿಯಮಗಳ ಪ್ರಕಾರ ಹಣ ಎಣಿಕೆ ಮಾಡುವ ಸಿಬ್ಬಂದಿ ಜೇಬುಗಳಿಲ್ಲದ ವಿಶೇಷ ಉಡುಪುಗಳನ್ನು ಧರಿಸಬೇಕಿತ್ತಾದರೂ, ಅದನ್ನು ಪಾಲಿಸಿರಲಿಲ್ಲ. ಇದಕ್ಕಿಂತಲೂ ಗಂಭೀರವಾದ ವಿಷಯವೆಂದರೆ, ಮಂದಿರದ ಸಿಸಿಟಿವಿ ದೃಶ್ಯಾವಳಿಗಳು ಪ್ರತಿ 45 ದಿನಗಳಿಗೊಮ್ಮೆ ಸ್ವಯಂಚಾಲಿತವಾಗಿ ಅಳಿಸಿಹೋಗುತ್ತವೆ. ಇದಕ್ಕೆ ಯಾವುದೇ ಡಿಜಿಟಲ್ ಆರ್ಕೈವಿಂಗ್ ಅಥವಾ ಬ್ಯಾಕಪ್ ವ್ಯವಸ್ಥೆಯನ್ನು ಮಾಡಿರಲಿಲ್ಲ. ಯಾವುದೇ ಪ್ರಜ್ಞಾಪೂರ್ವಕ ಸಾಕ್ಷ್ಯ ನಾಶದ ಪ್ರಯತ್ನ ನಡೆಯದೇ ಇದ್ದರೂ, ಭದ್ರತಾ ಬ್ಯಾಕಪ್ ಇಲ್ಲದ ಕಾರಣ ಎಸ್‌ಐಟಿ ತಂಡಕ್ಕೆ 45 ದಿನಗಳಿಗಿಂತ ಹಳೆಯದಾದ ಚಟುವಟಿಕೆಗಳನ್ನು ಪರಿಶೀಲಿಸುವುದು ಮತ್ತು ಸತ್ಯಾಸತ್ಯತೆಯನ್ನು ಪತ್ತೆಹಚ್ಚುವುದು ದೊಡ್ಡ ಸವಾಲಾಗಿ ಪರಿಣಮಿಸಿದೆ'' ಎಂದು ಅವರು ಹೇಳಿದ್ದಾರೆ.

ಇದರ ಜೊತೆಗೆ, ''ಒಪ್ಪಂದದ ಪ್ರಕಾರ ಹಣ ಎಣಿಕೆ ಪ್ರಕ್ರಿಯೆಯ ಸಂಪೂರ್ಣ ಜವಾಬ್ದಾರಿ ಹೊತ್ತಿದ್ದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ () ತನ್ನ ಕರ್ತವ್ಯ ನಿರ್ವಹಣೆಯಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ'' ಎಂದು ಮಿಶ್ರಾ ಆರೋಪಿಸಿದ್ದಾರೆ.

''ಬ್ಯಾಂಕ್ ತನ್ನ ಖಾಯಂ ಉದ್ಯೋಗಿಗಳನ್ನು ನಿಗಾ ವ್ಯವಸ್ಥೆಗೆ ನಿಯೋಜಿಸಬೇಕಿತ್ತು. ಆದರೆ, ಹಾಗೆ ಮಾಡಿರಲಿಲ್ಲ. ಕೇವಲ ಆರ್‌ಎಸ್‌ಎಸ್ ಸ್ವಯಂಸೇವಕರು ಅಥವಾ ಸಂಘಟನೆಯ ಸಂಪರ್ಕಗಳನ್ನು ಹೊಂದಿದ್ದಾರೆ ಎಂಬ ಏಕೈಕ ಕಾರಣಕ್ಕೆ ಯಾವುದೇ ಹಿನ್ನೆಲೆ ಅಥವಾ ಪಾತ್ರ ಪರಿಶೀಲನೆ ಇಲ್ಲದೆ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳುವ ಅನೌಪಚಾರಿಕ ವ್ಯವಸ್ಥೆಯನ್ನು ಎಸ್‌ಬಿಐ ಅನುಸರಿಸಿತು. ಇದೇ ಇಷ್ಟೆಲ್ಲ ದುರಂತಗಳಿಗೆ ಕಾರಣವಾಗಿದೆ. ಈ ಪದ್ಧತಿಯನ್ನು ತಕ್ಷಣವೇ ನಿಲ್ಲಿಸಬೇಕು'' ಎಂದು ಅವರು ಒತ್ತಾಯಿಸಿದ್ದಾರೆ.

ಈ ಇಡೀ ವಿವಾದವು ಟ್ರಸ್ಟ್‌ನೊಳಗಿನ ಆಂತರಿಕ ಬಿರುಕನ್ನು ಸ್ಪಷ್ಟವಾಗಿ ಮುಂಚೂಣಿಗೆ ತಂದಿದೆ. ಭ್ರಷ್ಟಾಚಾರದ ಆರೋಪಗಳು ಕೇಳಿಬಂದ ತಕ್ಷಣ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ, ಹಿರಿಯ ವಿಹೆಚ್‌ಪಿ ನಾಯಕ ಚಂಪತ್ ರೈ ಅವರು ಕೇವಲ ಒಂದು ಸಣ್ಣ ವಿಡಿಯೋ ಸಂದೇಶದ ಮೂಲಕ ವಾಡಿಕೆಯ ಆಡಿಟ್ ನಡೆಯುತ್ತಿದೆ ಎಂದು ಸಮರ್ಥಿಸಿಕೊಳ್ಳಲು ಯತ್ನಿಸಿದ್ದಾರೆ.

ಆದರೆ, ಚಂಪತ್ ರೈ ಅವರ ಪರಮ ಆಪ್ತ, ಹಿರಿಯ ಆರ್‌ಎಸ್‌ಎಸ್ ಕಾರ್ಯಕರ್ತ ರಾಮ್ ಪ್ರಸಾದ್ ಯಾದವ್ ಅಲಿಯಾಸ್ ಟಿನ್ನು ಅವರ ಮೇಲಿರುವ ಆರೋಪಗಳು ಪರಿಸ್ಥಿತಿಯನ್ನು ಸಂಕೀರ್ಣಗೊಳಿಸಿವೆ. ಟಿನ್ನು ಅವರು ಅಯೋಧ್ಯೆಯಲ್ಲಿ 50 ಕೋಟಿ ರೂಪಾಯಿಗೂ ಅಧಿಕ ಅಕ್ರಮ ಆಸ್ತಿ ಸಂಪಾದಿಸಿದ್ದಾರೆ ಮತ್ತು ಹಣ ಎಣಿಕೆ ಕೊಠಡಿಯ ಸಿಬ್ಬಂದಿ ನೇಮಕಾತಿಯಲ್ಲಿ ಅವರದ್ದೇ ಪ್ರಮುಖ ಪಾತ್ರವಿತ್ತು ಎಂಬ ಆರೋಪಗಳಿವೆ.

ಈ ಕುರಿತು ವಿಡಿಯೋ ಬಿಡುಗಡೆ ಮಾಡಿರುವ ಟಿನ್ನು, ತಮ್ಮ ಆಸ್ತಿಯು 2019ರ ತೀರ್ಪಿಗೂ ಮುನ್ನವೇ ಕಾನೂನುಬದ್ಧವಾಗಿ ಸಂಪಾದಿಸಿದ್ದಾಗಿದೆ. ಮಂದಿರದ ಎಂಜಿನಿಯರಿಂಗ್ ಸಂಸ್ಥೆಗಳಿಗೆ ಬಾಡಿಗೆಗೆ ನೀಡಿದ ಸ್ವತ್ತಿನಿಂದ ಬಂದ ಆದಾಯ ಎಂದು ವಾದಿಸಿದ್ದಾರೆ. ಆದರೆ ನೃಪೇಂದ್ರ ಮಿಶ್ರಾ ಹೇಳುವಂತೆ; ಟಿನ್ನು ಅವರು ಟ್ರಸ್ಟ್‌ನ ವಿಶ್ವಾಸವನ್ನು ದುರುಪಯೋಗಪಡಿಸಿಕೊಂಡಿದ್ದಾರೆಯೇ ಎಂಬುದನ್ನು ಎಸ್‌ಐಟಿ ತೀವ್ರವಾಗಿ ವಿಚಾರಣೆ ನಡೆಸಬೇಕಿದೆ.

ಇದೆಲ್ಲದರ ನಡುವೆ, ಇದೀಗ, ಯೋಗಿ ಆದಿತ್ಯನಾಥ್ ಅವರು, ರಾಮಮಂದಿರದಲ್ಲಿ ನಡೆದಿರುವ ಅಕ್ರಮವನ್ನು ಪ್ರಶ್ನಿಸುವುದು ಅವಮಾನ ಎಂದಿದ್ದಾರೆ. ಅವರ ಹೇಳಿಕೆಯು ಸತ್ಯವನ್ನು ಹುಡುಕುವ ಭರವಸೆಗಿಂತ ಹೆಚ್ಚಾಗಿ ಬೆದರಿಕೆಗಳೇ ತುಂಬಿರುವಂತೆ ಕಾಣುತ್ತದೆ. ಸಾರ್ವಜನಿಕರು ಕೇವಲ ಹಾಲು ಮತ್ತು ನೀರಿನ ಲೆಕ್ಕವನ್ನು ಮಾತ್ರ ಕೇಳುತ್ತಿಲ್ಲ, ಬದಲಿಗೆ ಮಂದಿರಕ್ಕೆ ಭಕ್ತರು ಅರ್ಪಿಸಿದ ಚಿನ್ನ, ಬೆಳ್ಳಿ, ಬೆಲೆಬಾಳುವ ಕಲ್ಲುಗಳು, ಶಿಲಾಫಲಕಗಳು ಮತ್ತು ಒಟ್ಟಾರೆ ನಗದು ಕಾಣಿಕೆಗಳ ಸಂಪೂರ್ಣ ಪಾರದರ್ಶಕ ಲೆಕ್ಕವನ್ನು ಕೇಳುತ್ತಿದ್ದಾರೆ. ಸಿಸಿಟಿವಿ ಫುಟೇಜ್ ಅಳಿಸಿಹೋಗಿರುವುದು, ಬ್ಯಾಂಕುಗಳ ಬೇಜವಾಬ್ದಾರಿತನ ಮತ್ತು ನಿಯಮಗಳ ಉಲ್ಲಂಘನೆಗಳು ಕೇವಲ ಒಂದು ಆಕಸ್ಮಿಕ ಅಪಘಾತವಲ್ಲ, ಇದರ ಹಿಂದೆ ದೊಡ್ಡ ಲೋಪವಿದೆ.

ಭಾರತದ ಮೂಲೆ ಮೂಲೆಗಳಿಂದ ಬಡವರು, ಕಾರ್ಮಿಕರು, ವೃದ್ಧರು ತಮ್ಮ ಹಸಿವನ್ನು ನೀಗಿಸಿಕೊಂಡು ತಲಾ 10, 50, 100 ರೂಪಾಯಿಗಳಂತೆ ರಾಮಮಂದಿರಕ್ಕೆ ನಿಧಿ ಸಮರ್ಪಿಸಿದ್ದಾರೆ. ಈ ಭಕ್ತಿಯ ಹಣವನ್ನು ಮಂದಿರದ ಒಳಗಿರುವವರೇ ಲೂಟಿ ಹೊಡೆಯುತ್ತಿದ್ದಾರೆ ಎಂಬ ಸತ್ಯ ಹೊರಬಂದಾಗ, ಅದರ ವಿರುದ್ಧ ಧ್ವನಿ ಎತ್ತುವುದು ಭಕ್ತಿಯ ಲಕ್ಷಣವೇ ಹೊರತು ಪಿತೂರಿಯಲ್ಲ.

ದೇವಸ್ಥಾನದ ಗರ್ಭಗುಡಿಯ ಪಕ್ಕದಲ್ಲೇ ಕಳ್ಳತನ ನಡೆಯುವಾಗ ಕಣ್ಣುಮುಚ್ಚಿ ಕುಳಿತುಕೊಳ್ಳುವುದು ಶ್ರೀರಾಮನಿಗೆ ಹಾಗೂ ಆತನ ಕೋಟ್ಯಂತರ ಭಕ್ತರಿಗೆ ಮಾಡುವ ದ್ರೋಹ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಾರ್ವಜನಿಕ ನಿಧಿಯ ಲೆಕ್ಕ ಕೇಳುವುದನ್ನು ಅವಮಾನ ಎಂದು ಕರೆಯುವುದು ಲೂಟಿ ಮಾಡುವವರು, ಆಡಳಿತಾತ್ಮಕ ಲೋಪ ಎಸಗುವವರು ಹಾಗೂ ಸತ್ಯವನ್ನು ಮುಚ್ಚಿಡಲು ಯತ್ನಿಸುವ ಹುನ್ನಾರ.

ಕಳ್ಳತನವನ್ನು ಪ್ರಶ್ನಿಸುವವರನ್ನು ಅಯೋಧ್ಯೆಯ ವಿರೋಧಿಗಳು ಎಂದು ಬಿಂಬಿಸುವುದು, ವ್ಯವಸ್ಥೆಯ ತಪ್ಪುಗಳನ್ನು ಮರೆಮಾಚುವ ರಕ್ಷಣಾತ್ಮಕ ತಂತ್ರದಂತೆ ಕಾಣುತ್ತದೆ. ಕಳ್ಳತನವನ್ನು ಮುಚ್ಚಿಡುವುದು ಅಯೋಧ್ಯೆಗೆ ಗೌರವ ತರುವುದಿಲ್ಲ; ಬದಲಿಗೆ ತಪ್ಪಿತಸ್ಥರನ್ನು ಜೈಲಿಗಟ್ಟಿದಾಗ ಮಾತ್ರ ಅಯೋಧ್ಯೆಯ ಘನತೆ ಜಗತ್ತಿನೆದುರು ಎತ್ತಿಹಿಡಿಯುತ್ತದೆ.

ಪಟ್ಟಿಯಲ್ಲಿ ಹೆಸರಿಲ್ಲದವರಿಗೆ ಪಡಿತರ ಬಂದ್ ಮಾಡುವ ಪ.ಬಂಗಾಳ ಆದೇಶ ಪ್ರಶ್ನಿಸಿದ ಅರ್ಜಿಯ ತುರ್ತು ವಿಚಾರಣೆಗೆ ಸುಪ್ರೀಂ ನಕಾರ

ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟ ಕಾರಣಕ್ಕೆ ಪಡಿತರ (ರೇಷನ್) ಸೌಲಭ್ಯವನ್ನು ನಿರಾಕರಿಸಿದ ಪಶ್ಚಿಮ ಬಂಗಾಳ ಸರ್ಕಾರದ ಕ್ರಮವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ತುರ್ತಾಗಿ ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಅರ್ಜಿದಾರರು ಈ ವಿಚಾರವಾಗಿ ಮೊದಲು ಕಲ್ಕತ್ತಾ ಹೈಕೋರ್ಟ್ ಅನ್ನು ಸಂಪರ್ಕಿಸಬೇಕು ಎಂದು ನ್ಯಾಯಪೀಠ ನಿರ್ದೇಶಿಸಿದೆ.



ನ್ಯಾಯಮೂರ್ತಿ ಬಿ.ವಿ. ನಾಗರತ್ನ ಮತ್ತು ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಅವರಿದ್ದ ಪೀಠವು ಈ ಅರ್ಜಿಯ ತುರ್ತು ವಿಚಾರಣೆಗೆ ನಿರಾಕರಿಸಿತು. ''ಕಲ್ಕತ್ತಾ ಹೈಕೋರ್ಟ್ ಈಗಾಗಲೇ ಬೇಸಿಗೆ ರಜೆ ಮುಗಿಸಿ ಕಾರ್ಯನಿರ್ವಹಿಸುತ್ತಿದೆ. ಇಂತಹ ರಾಜ್ಯ ಮಟ್ಟದ ಸಮಸ್ಯೆಗಳಿಗೆ ಅಲ್ಲಿಯೇ ಪರಿಹಾರ ಕಂಡುಕೊಳ್ಳುವುದು ಸೂಕ್ತ'' ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿತು.

ಪಶ್ಚಿಮ ಬಂಗಾಳ ಮೂಲದ ಪಶ್ಚಿಮ ಬಂಗಾ ಕೃಷಿ ಮಜೂರ್ ಸಮಿತಿ ಎಂಬ ಕಾರ್ಮಿಕ ಸಂಘಟನೆಯು ಸಂವಿಧಾನದ ವಿಧಿ 32ರ ಅಡಿಯಲ್ಲಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ವಕೀಲ ಎಸ್. ಪ್ರಸನ್ನ ಅವರು ವಾದ ಮಂಡಿಸುತ್ತಾ, ''ಇದು ಕೇವಲ ಒಂದು ರಾಜ್ಯದ ಸಮಸ್ಯೆಯಲ್ಲ, ಇದು ದೇಶಾದ್ಯಂತ ಪರಿಣಾಮ ಬೀರಬಲ್ಲ ವಿಚಾರ. ಸುಪ್ರೀಂ ಕೋರ್ಟ್ ಈಗಾಗಲೇ ಮತದಾರರ ಪಟ್ಟಿಯ ಪರಿಷ್ಕರಣೆ () ಪ್ರಕ್ರಿಯೆಯ ಸಿಂಧುತ್ವವನ್ನು ಎತ್ತಿಹಿಡಿದಿರುವುದರಿಂದ, ಅದರಿಂದ ಉಂಟಾಗಿರುವ ಪಡಿತರ ವಂಚಿತ ಸಮಸ್ಯೆಯನ್ನು ಸುಪ್ರೀಂ ಕೋರ್ಟ್ ಪರಿಹರಿಸಬೇಕು'' ಎಂದು ಕೋರಿದ್ದರು.

ಆದರೆ, ನ್ಯಾಯಪೀಠವು ಈ ವಾದವನ್ನು ತಳ್ಳಿಹಾಕಿತು. ''ಮತದಾರರ ಪಟ್ಟಿಯ ಪರಿಷ್ಕರಣೆಯ ಸಿಂಧುತ್ವ ಬೇರೆ, ಪಡಿತರ ಸೌಲಭ್ಯ ನಿರಾಕರಣೆಯ ವಿಚಾರವೇ ಬೇರೆ. ಇದು ಸಂಪೂರ್ಣವಾಗಿ ರಾಜ್ಯಕ್ಕೆ ಸಂಬಂಧಿಸಿದ ಪ್ರಕರಣವಾದ್ದರಿಂದ ಸ್ಥಳೀಯ ಹೈಕೋರ್ಟ್‌ನ ವ್ಯಾಪ್ತಿಗೆ ಬರುತ್ತದೆ'' ಎಂದು ನ್ಯಾಯಮೂರ್ತಿಗಳು ಸ್ಪಷ್ಟಪಡಿಸಿದರು.

ಪಶ್ಚಿಮ ಬಂಗಾಳ ಸರ್ಕಾರದ ಆಹಾರ ಮತ್ತು ಸರಬರಾಜು ಇಲಾಖೆಯು, ವಿಶೇಷ ತೀವ್ರ ಪರಿಷ್ಕರಣೆ () ನಂತರ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟಿರುವವರ ಪಡಿತರ ಚೀಟಿಗಳನ್ನು ಅಮಾನ್ಯಗೊಳಿಸಲು ಆದೇಶಿಸಿದೆ. ಮತದಾರರ ಪಟ್ಟಿಯಲ್ಲಿ ಅನುಪಸ್ಥಿತರು, ಸ್ಥಳಾಂತರಗೊಂಡವರು, ನಕಲಿ ಅಥವಾ ಮೃತಪಟ್ಟವರು ಎಂದು ನಮೂದಾಗಿರುವವರ ಪಡಿತರ ಸೌಲಭ್ಯವನ್ನು ಸ್ಥಗಿತಗೊಳಿಸಲಾಗುತ್ತಿದೆ.

ಈ ಪ್ರಕ್ರಿಯೆಯಲ್ಲಿ ಸುಮಾರು 27.16 ಲಕ್ಷ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ. ಆದರೆ, ತಾಂತ್ರಿಕ ದೋಷಗಳು, ಹೆಸರಿನಲ್ಲಿನ ಅಕ್ಷರ ದೋಷಗಳು ಅಥವಾ ಸರಿಯಾದ ನೋಟಿಸ್ ನೀಡದ ಕಾರಣಕ್ಕೆ ನೈಜ ಮತದಾರರಿಗೂ ತೊಂದರೆಯಾಗಿದೆ ಎಂದು ಪ್ರತಿಪಕ್ಷಗಳು ಮತ್ತು ಸ್ಥಳೀಯರು ಆರೋಪಿಸಿದ್ದಾರೆ. ಅಲ್ಲದೆ, ಇದು ಅಲ್ಪಸಂಖ್ಯಾತರು, ದಲಿತರು ಮತ್ತು ಬುಡಕಟ್ಟು ಸಮುದಾಯಗಳನ್ನು ಗುರಿಯಾಗಿಸಿಕೊಂಡು ನಡೆಸಿದ ಕ್ರಮ ಎಂಬ ತೀವ್ರ ವಿರೋಧ ವ್ಯಕ್ತವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR